₹ 4 | ಪುಟ: 4 | ಸಂಪುಟ: 4 | ಸಂಚಿಕೆ 62 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

Volume : 4 | Issue: 62 | Friday, 21, APRIL, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

### ಭಯದಲ್ಲಿ ಸಿದ್ದರಾಮಯ್ಯ ಒಳ ಮೈತ್ರಿ, ಹೊರ ಮೈತ್ರಿ ಎಂದು ಮಾತನಾಡುತ್ತಿದ್ದಾರೆ

## ಚುನಾವಣೆಯಲ್ಲಿ ಸ್ವಂತ ಬಲದಿಂದ ಗೆಲ್ಲುತ್ತೇನೆ: ಬೊಮ್ಮಾಯಿ

ಬೆಂಗಳೂರು: ಒಳ ಮೈತ್ರಿ, ಹೊರ ಮೈತ್ರಿ ಎಂದು ಮಾತನಾಡುತ್ತಿರುವ ಸಿದ್ದರಾಮಯ್ಯ ಅವರಲ್ಲಿ ಭಯ ಹುಟ್ಟಿಕೊಂಡಿದೆ ಎಂದು ಮುಖ್ಯಮಂತ್ರಿ ಬಸವರಾ ಬೊಮ್ಮಾಯಿಯವರು ಗುರುವಾರ ಹೇಳಿದ್ದಾರೆ.

ಆರ್ ಟಿ ನಗರದ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಸ್ಪರ್ಧಿಸುತ್ತಿರುವ ಶಿಗ್ಗಾವಿ ಕ್ಷೇತ್ರದಲ್ಲಿ ಯಾರು ಯಾರ ಜತೆಗಾದರೂ ಹೊಂದಾಣಿಕೆ ಮಾಡಿಕೊಳ್ಳಲಿ. ನನಗೆ ಭಯ ಇಲ್ಲ. ನಾನು ನನ್ನ ಸ್ವಂತ ಬಲದಿಂದ ಗೆಲ್ಲುತ್ತೇನೆಂದು ವಿಶ್ವಾಸ ವ್ಯಕ್ತಪಡಿಸಿದರು.

ವರುಣ ಕ್ಷೇತ್ರದಲ್ಲಿ ಜೆಡಿಎಸ್ ಒಳಮೈತ್ರಿ ಮಾಡಿಕೊಂಡಿದೆ' ಎಂದು ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಅವರು ಮಾಡಿರುವ ಆರೋಪಕ್ಕೆ ಪ್ರತಿಕ್ರಿಯಿಸಿ, 'ಯಾರೂ ಸೇರಿಕೊಂಡರೂ ಸಿದ್ದರಾಮಯ್ಯ ಅವರಿಗೆ ಸ್ವಂತ ಬಲ ಇದ್ದರೆ, ಅವರು ಗೆಲ್ಲುತ್ತಾರೆ. ಇಲ್ಲದಿದ್ದರೆ ಗೆಲ್ಲುವುದಿಲ್ಲ' ಎಂದು ಹೇಳಿದರು.

ಒಳ ಮೈತ್ರಿ, ಹೊರ ಮೈತ್ರಿ ಎಂದು ಮಾತನಾಡುತ್ತಿರುವ ಸಿದ್ದರಾಮಯ್ಯ ಅವರಿಗೆ ಭಯ ಹುಟ್ಟಿಕೊಂಡಿದೆ. ಎಲ್ಲ ಪಕ್ಷಗಳಿಂದಲೂ ಅಭ್ಯರ್ಥಿಗಳು ಫಿಕ್ಸ್ ಆಗಿದ್ದಾರೆ ಎಂಬ ಭಯವಿದ್ದು, ಅವ-ರಿಬ್ಬರೂ ಸೇರಿಕೊಂಡಿದ್ದಾರೆ ಎಂಬ ಭಯ ಬಂದಿದೆ. ಆದರೆ, ಎಲ್ಲ ಅಭ್ಯರ್ಥಿಗಳು ತಾವೇ ಗೆಲ್ಲಬೇಕೆಂದು ಚುನಾವಣೆಗೆ



ನಿಲ್ಲುತ್ತಾರೆ' ಎಂದು ತಿಳಿಸಿದರು.

ನನ್ನ ಕ್ಷೇತ್ರ ಶಿಗ್ಗಾವಿಯಲ್ಲೂ ಕಾಂಗ್ರೆಸ್-ಜೆಡಿಎಸ್ ಸೇರಿಕೊಂಡಿದ್ದಾರೆ. ಇದ-ರಿಂದ ನನಗೇನೂ ಭಯವಿಲ್ಲ ಕಾಂಗ್ರೆಸ್ ಅಭ್ಯರ್ಥಿ ಬದಲಾಯಿಸಿದೆ. ಆದರೆ, ನನ್ನ ಮೇಲೆ ವ್ಯತ್ಯಾಸ ಆಗುವುದಿಲ್ಲ. ಕಾಂಗ್ರೆಸ್‌ನ ಒಬ್ಬರಿಗೆ ಜೆಡಿಎಸ್ ಟಿಕೆಟ್ ಕೊಟ್ಟಿದೆ. ಇದನ್ನು ನಾನು ಕಾಂಗ್ರೆಸ್ ಜೆಡಿಎಸ್ ಮೈತ್ರಿ ಎನ್ನಬಹುದೇ? ಇಂತಹ ಆರೋಪವನ್ನು ನಾನು ಮಾಡುವುದಿಲ್ಲ' ಎಂದರು.

ಯಡಿಯೂರಪ್ಪ ನಿವಾಸದಲ್ಲಿ ನಡೆದ ಸಭೆ ಕುರಿತು ಮಾತನಾಡಿ, ಯಡಿಯೂರಪ್ಪ ನೇತೃತ್ವದಲ್ಲಿ ಲಿಂಗಾಯತರ ಸಭೆಯಲ್ಲಿ ಸದ್ಯದ ರಾಜಕೀಯ ಸ್ಥಿತಿಗತಿಗಳ ಬಗ್ಗೆ ಚರ್ಚೆ ಆಯಿತು. ಕಾಂಗ್ರೆಸ್ನವರು ಅಪಪ್ರಚಾರ ಮಾಡುತ್ತಿದ್ದಾರೆ, ಇದನ್ನು ಹೇಗೆ ಕೌಂಟ-ರ್ ಮಾಡಬೇಕು ಎಂಬುದರ ಬಗ್ಗೆ ಚರ್ಚೆ ಮಾಡಲಾಯಿತು. ಲಿಂಗಾಯತ ಸಿಎಂ ಬಗ್ಗೆಯೂ ಕೆಲವರು ಸಲಹೆ ಕೊಟ್ಟರು. ಸಭೆಯಲ್ಲಿ ಧರ್ಮೇಂದ್ರ ಪ್ರಧಾನ್ ಅವರೂ ಭಾಗಿಯಾಗಿದ್ದರು. ಅವರು ಹೈಕಮಾಂಡ್ಗೆ

**ಲಿಂಗಾಯತ ಮುಖ್ಯಮಂತ್ರಿ ಘೋಷಣೆ ಬಗ್ಗೆ ಯಾವುದೇ ನಿರ್ಣಯ ಆಗಿಲ್ಲ ಎಂದ ಸಿಎಂ ಬೊಮ್ಮಾಯಿ**

ಬೆಂಗಳೂರು: ಯಡಿಯೂರಪ್ಪ ನೇತೃತ್ವದಲ್ಲಿ ನಡೆದ ಲಿಂಗಾಯತ ನಾಯಕರ ಸಭೆಯಲ್ಲಿ ಸದ್ಯದ ರಾಜಕೀಯ ಸ್ಥಿತಿಗತಿಗಳ ಬಗ್ಗೆ ಚರ್ಚೆ ಆಗಿದ್ದು, ಲಿಂಗಾಯತ ಸಿಎಂ ಘೋಷಣೆ ಬಗ್ಗೆ ಯಾವುದೇ ನಿರ್ಣಯ ಆಗಿಲ್ಲ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಸಭೆಯ ಭಾವನೆಗಳನ್ನು ತಿಳಿಸುವುದಾಗಿ ಹೇಳಿದ್ದಾರೆ. ಲಿಂಗಾಯತ ಸಿಎಂ ಘೋಷಣೆ ಬಗ್ಗೆ ನಿರ್ಣಯ ಆಗಿಲ್ಲ ಎಂದು ಸ್ಪಷ್ಟಪಡಿಸಿದರು.

ಕಾಂಗ್ರೆಸ್ನದ್ದು ಲಿಂಗಾಯತ ವಿರೋಧಿ ನಡೆ. ಅವರಿಗೆ 1967 ರಿಂದ ಈವರೆಗೆ 50 ವರ್ಷದಲ್ಲಿ ಒಬ್ಬ ಲಿಂಗಾಯತ ಸಿಎಂ ಮಾಡಕ್ಕಾಗಲಿಲ್ಲ. ಈ ನಡುವೆ ವಿರೇಂದ್ರ ಪಾಟೀಲರಿಗೆ ಒಂಬತ್ತು ತಿಂಗಳು ಅಧಿಕಾರ ಕೊಟ್ಟು ನಂತರ ಅವರನ್ನು ಕಾಂಗ್ರೆಸ್ ಸರಿಯಾಗಿ ನಡೆಸಿಕೊಳ್ಳಲಿಲ್ಲ. ಏರ್ಪೋರ್ಟ್ನಲ್ಲೇ ಅವರನ್ನು ತೆಗೆದು ಹಾಕಿದರು. ರಾಜಶೇಖರ ಮೂರ್ತಿ ಅವರನ್ನು ನಡೆಸಿಕೊಂಡ ರೀತಿಯೂ ಸರಿಯಲ್ಲ. ಲಿಂಗಾಯತ ಧರ್ಮವನ್ನು ಒಡೆಯಲು ಕಾಂಗ್ರೆಸ್ ಹೋಗಿತ್ತು. ಮತಬ್ಯಾಂಕ್ಗಾಗಿ ಧರ್ಮ ಒಡೆಯಲು ಹೋಗಿದ್ದರು. ಜನ ಇದನ್ನೆಲ್ಲ ಮರೆಯಲ್ಲ, ಕಾಂಗ್ರೆಸ್‌ನವರು ದಲಿತರು, ಹಿಂದುಳಿದವರು, ಲಿಂಗಾಯತರಿಗೆ ಮೋಸ ಮಾಡಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ನಮ್ಮ ಪ್ರಚಾರ ಮಿಲಿಟರಿ ಹೋಟೆಲ್ನಿಂದಲೇ ಆರಂಭವಾಗಿದೆ. ಅಲ್ಲಿ ಸ್ಥಳೀಯ ಸಾಮಾನ್ಯ ಜನ ಇರ್ತಾರೆ ಅಂತಲೇ ಡಿಕೆಶಿ ಅವರನ್ನು ಭೇಟಿ ಮಾಡಲ್ಲ. ಅಂತಹ ಸಾಮಾನ್ಯ ಜನರನ್ನು ಭೇಟಿ ಮಾಡೋದಕ್ಕೆ ಅಶೋಕ್ ಮಿಲಿಟರಿ ಹೋಟೆಲ್ಗೆ ಹೋಗಿದ್ದಾರೆ. ಇದರಲ್ಲಿ ಏನ್ ತಪ್ಪಿದೆ? ಯಾಕೆ ಮಿಲಿಟರಿ ಹೋಟೆಲ್ಗೆ ಹೋಗಬಾರದು? ಎಂದು ಅಶೋಕ್ ಕನಕಪುರದಲ್ಲಿ ಮಿಲಿಟರಿ ಹೋಟೆಲ್ಗೆ ಬಂದು ಹೋಗಿ ಎಂಬ ಡಿಕೆ ಶಿವಕುಮಾರ್ ಹೇಳಿಕೆಗೆ ತಿರುಗೇಟು ನೀಡಿದರು.

ವಲಸೆ ಹೋದವರನ್ನು ವಾಪಸ್ ಕರೆತರುವ ಕೆಲಸ ಮಾಡುತ್ತಿದ್ದೇವೆ. ಜಿಲ್ಲಾ, ಹೋಬಳಿ ಮಟ್ಟದಲ್ಲಿ ಆ ಕೆಲಸ ಮಾಡುತ್ತಿದ್ದೇವೆ. ಎಲ್ಲ ರೀತಿಯ ಪ್ರಯತ್ನಗಳು ನಡೆಯುತ್ತಿವೆ ಎಂದು ತಿಳಿಸಿದರು.

ಈಶ್ವರಪ್ಪ ಕುಟುಂಬಕ್ಕೆ ಟಿಕೆಟ್ ಮಿಸ್ ಆಗಿರುವ ಪ್ರಶ್ನೆಗೆ ಯಾವುದೇ ಪ್ರತಿಕ್ರಿಯೆ ನೀಡದ ಸಿಎಂ, ನಾಮಪತ್ರ ಪ್ರಕ್ರಿಯೆ ಮುಗಿದ ಮೇಲೆ ಪ್ರಧಾನಿ ಅವರು ರಾಜ್ಯಕ್ಕೆ ಪ್ರಚಾರಕ್ಕೆ ಬರುತ್ತಾರೆ ಎಂದು ತಿಳಿಸಿದರು.

## ಸತೀಶ್ ಜಾರಕಿಹೊಳಿ ನಾಮಪತ್ರ ಸಲ್ಲಿಕೆ




ಹುಕ್ಕೇರಿ: ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿಯವರು ಯಮಕನಮರಡಿ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ಗುರುವಾರ ರಾಹುಕಾಲದಲ್ಲೇ ನಾಮಪತ್ರ ಸಲ್ಲಿಸಿದರು.

ಸಮಾಜದಲ್ಲಿ ಮೌಢ್ಯದ ವಿರುದ್ಧ ಸದಾ ಜಾಗೃತಿ ಮೂಡಿಸುತ್ತಿರುವ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ ಅವರು ರಾಹುಕಾಲದಲ್ಲಿ ನಾಮಪತ್ರ ಸಲ್ಲಿಸುವ ಮೂಲಕ ಮತ್ತೊಮ್ಮೆ ತಮ್ಮ ವೈಚಾರಿಕ ಚಿಂತನೆ ಸಾಬೀತು ಪಡಿಸಿದರು.

ನಾಮಪತ್ರವನ್ನು ಮೆರವಣಿಗೆ ನಡೆಸದೆ ಕೇವಲ ಐದು ಜನರೊಂದಿಗೆ ಹುಕ್ಕೇರಿ ತಹಶೀಲ್ದಾರ್ ಕಚೇರಿಗೆ ಬಂದು ಚುನಾವಣಾ ಅಧಿಕಾರಿಗೆ ನಾಮಪತ್ರ ಸಲ್ಲಿಸಿದರು.

ಯಮಕನಮರಡಿ ವಿಧಾನಸಭಾ ಕ್ಷೇತ್ರದಿಂದ ನಾಲ್ಕನೇ ಬಾರಿಗೆ ನಾಮಪತ್ರ ಸಲ್ಲಿಸಿದ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ, ಈ ಬಾರಿಯೂ ಯಾವುದೇ ಆಡಂಬರ ಇಲ್ಲದೆ ಐದು ಜನರೊಂದಿಗೆ ಬಂದು ನಾಮಪತ್ರ ಸಲ್ಲಿಸಿದರು.

ಇದೇ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಜನರ ಆಶೋತ್ತರಗಳಿಗೆ ಅನುಗುಣವಾಗಿ ಕಳೆದ 15 ವರ್ಷಗಳಿಂದ ಯಮಕನಮರಡಿ ಮತಕ್ಷೇತ್ರದ ಜನರ ಸೇವೆ ಮಾಡುತ್ತಾ ಬಂದಿದ್ದೇನೆ. ಈ ಬಾರಿಯೂ ಜನರ ಆಶೀರ್ವಾದ ಮತ್ತು ಬೆಂಬಲದೊಂದಿಗೆ ನಾಲ್ಕನೇ ಬಾರಿಗೆ ನಾಮಮಪತ್ರ ಸಲ್ಲಿಸಿದ್ದು, ಅಭಿವೃದ್ಧಿ ಮುಂದುವರೆಸಲು ಜನ ನನಗೆ ಮತ್ತೊಮ್ಮೆ ಅವಕಾಶ ನೀಡುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಲಕ್ಷ್ಮಣ-ರಾವ್ ಚಿಂಗಳೆ, ಯುವ ನಾಯಕ ರಾಹುಲ್ ಜಾರಕಿಹೊಳಿ ಸೇ-ರಿದಂತೆ ಯಮಕನಮರಡಿ ಮತಕ್ಷೇತ್ರದ ಹಲವು ಮುಖಂಡರು ಇದ್ದರು.

## ಕನಕಪುರದಲ್ಲಿ ಡಿ.ಕೆ ಸುರೇಶ್ ನಾಮಪತ್ರ ಸಲ್ಲಿಕೆ

ಕನಕಪುರ: ರಾಜ್ಯ ವಿಧಾನಸಭಾ ಚುನಾವಣೆಗೆ ಸ್ಪರ್ಧಿಸಲು ನಾಮಪತ್ರ ಸಲ್ಲಿಕೆಗೆ ಇರುವ ಗಡುವು ಇನ್ನು ಕೆಲವೇ ಗಂಟೆಗಳಲ್ಲಿ ಕೊನೆಯಾಗಲಿದೆ. ಈ ನಡುವೆ ಹಲವು ಕ್ಷೇತ್ರಗಳಲ್ಲಿ ಕಾಂಗ್ರೆಸ್-ಬಿಜೆಪಿ ಕೊನೆಯ ಕ್ಷಣದಲ್ಲಿ ತಂತ್ರಗಾರಿಕೆಯನ್ನು ಬದಲಾವಣೆ ಮಾಡಲು ಮುಂದಾಗಿವೆ.

ಹೊಳೆನರಸಿಪುರದಲ್ಲಿ ಬಿಜೆಪಿ ಕೊನೆ ಕ್ಷಣದಲ್ಲಿ ಹಾಸನ ಶಾಸಕ ಪ್ರೀತಮ್ ಗೌಡ ಅವರನ್ನು ರೇವಣ್ಣ ವಿರುದ್ಧ ಕಣಕ್ಕಿಳಿಸಿತ್ತು. ಈಗ ಕನಕಪುರದಲ್ಲಿ ಕಾಂಗ್ರೆಸ್




ಡಿ.ಕೆ ಸುರೇಶ್ ಅವರನ್ನು ಅಭ್ಯರ್ಥಿಯನ್ನಾಗಿ ಕಣಕ್ಕಿಳಿಸಿದೆ.

ಏ.17 ರಂದು ಡಿ.ಕೆ ಶಿವಕುಮಾರ್ ಕಾಂಗ್ರೆಸ್ ಅಭ್ಯರ್ಥಿಯಾಗಿ ಕನಕಪುರದಿಂದ ನಾಮಪತ್ರ ಸಲ್ಲಿಸಿದ್ದರು. ಆದರೆ ಅವರ ನಾಮಪತ್ರ ತಿರಸ್ಕೃತಗೊಳ್ಳುವ ಸಾಧ್ಯತೆ ಇರುವುದರಿಂದ ಮುನ್ನೆಚ್ಚ-ರಿಕಾ ಕ್ರಮವಾಗಿ ಬೆಂಗಳೂರು ಗ್ರಾಮಾಂತರ ಸಂಸದ ಡಿ.ಕೆ ಸುರೇಶ್ ಕನಕಪುರದಿಂದ ಇಂದು (ಏ.20) ರಂದು ನಾಮಪತ್ರ ಸಲ್ಲಿಸಿದ್ದಾರೆ.



### ಡಾ ರವಿ ಪಾಟೀಲ ಬಿಜೆಪಿಯ ಸೂಕ್ತ ಅಭ್ಯರ್ಥಿ ನಮ್ಮೆಲ್ಲರ ಸಂಪೂರ್ಣ ಬೆಂಬಲ

ಬೆಳಗಾವಿ: ಬೆಳಗಾವಿ ನಗರದ ಉತ್ತರ ಮತಕ್ಷೇತ್ರದ ಚುನಾವಣಾ ರಣತಂತ್ರ ದಿನದಿಂದ ದಿನಕ್ಕೆ ರಂಗೇರುತ್ತಿದೆ, ಈ ಚುನಾವಣೆಯಲ್ಲಿ ಗೆಲ್ಲುವ ಸಲುವಾಗಿ, ಬಿಜೆಪಿಯ ಅಭ್ಯರ್ಥಿ ಡಾ ರವಿ ಪಾಟೀಲ ಅವರ ಹಾಗೂ ಅವರ ತಂಡ ನಿರಂತರವಾಗಿ ಪ್ರಯತ್ನ ನಡೆಸುತ್ತಲೇ ಇರುವದು ಗಮನಾರ್ಹ.

ಹಾಲಿ ಶಾಸಕ ಅನಿಲ್ ಬೇನಕೆ ಅವರ ಸ್ಥಾನದಲ್ಲಿ ಹೊಸ ಅಭ್ಯರ್ಥಿಯಾದ ವೈದ್ಯ ರವಿ ಪಾಟೀಲ್ ಅವ-ರಿಗೆ ಬಿಜೆಪಿಯ ಟಿಕೆಟ್ ನೀಡಿ, ಸ್ಪರ್ಧಿಸುವಂತೆ ವ-ರಿಷ್ಠರು ಅವಕಾಶ ನೀಡಿದರು.

ಆದರೆ ಮೊದಮೊದಲು ಕೆಲ ಬಿಜೆಪಿಗರು ಇದರ ಬಗ್ಗೆ ಸ್ವಲ್ಪ ತಮ್ಮ ಅಸಮಾಧಾನ ವ್ಯಕ್ತ ಪಡಿಸಿದ್ದರು, ನಂತರ ವರಿಷ್ಠರು ಸಭೆ ಮಾಡಿ, ಎಲ್ಲಾ ಗೊಂದಲಗಳನ್ನು ಬಗೆಹರಿಸಿ, ಈಗ ಎಲ್ಲರೂ ಒಗ್ಗಟ್ಟಿನಿಂದ ಬಿಜೆಪಿ ಗೆಲ್ಲಿಸುವ ಪಣ ತೊಟ್ಟಿದ್ದಾರೆ ಎಂಬ ಮಾಹಿತಿ ಇದೆ.

ಸಾರ್ವಜನಿಕರು, ಕಾರ್ಯಕರ್ತರು, ಜಿಲ್ಲಾಮಟ್ಟದ ತಾಲೂಕು ಮಟ್ಟದ ಪದಾಧಿಕಾರಿಗಳು, ಎಲ್ಲರೂ ವ-ರಿಷ್ಠರ, ಬಿಜೆಪಿ ಪಕ್ಷದ ತತ್ವ ಸಿದ್ಧಾಂತಗಳ ಒಪ್ಪಿಕೊಂಡು ಈ ಸಲದ ಚುನಾವಣೆಯಲ್ಲಿ ಡಾ ರವಿ ಪಾಟೀಲ್ ಅವರನ್ನು ಆರಿಸಿ ತರಬೇಕು ಎಂಬ ನಿರ್ಧಾರಕ್ಕೆ ಬಂದಿದ್ದಾರೆ.

ಅದೇ ರೀತಿ ಬೆಳಗಾವಿ ಉತ್ತರ ಮತಕ್ಷೇತ್ರದ ಎಲ್ಲಾ 33 ವಾರ್ಡಿನ, ವಿಜೇತ ಹಾಗೂ ಪರಾಜಿತ ನಗರ ಸೇವಕರು ಹಾಗೂ ಅವರ ವಾರ್ಡಿನ ಬೆಂಬಲಿಗರು ಎಲ್ಲರೂ ಸೇರಿ ಡಾ ರವಿ ಪಾಟೀಲ್ ಅವರಿಗೆ ಬೆಂಬಲ ನೀಡಿ ಗೆದ್ದೇ ಗೆಳ್ಳಿಸುತ್ತೆವೆ ಎಂದು ಅತೀ ಉತ್ಸುಕತೆಯಿಂದ ಹೇಳಿದ್ದಾರೆ..

ಉತ್ತರ ಮತಕ್ಷೇತ್ರದ ವಾರ್ಡ್ ಸಂಖ್ಯೆ 26, ವಾರ್ಡ ಸಂಖ್ಯಾ 4, ವಾರ್ಡ ಸಂಖ್ಯಾ 6ರ ವಿಜೇತ ನಗರ ಸೇವಕರಾದ ಮೇಘಾ ಹೂಗಾರ, ಜಯತೀರ್ಥ ಸವದತ್ತಿ, ಸಂತೋಷ ಪೆಡ್ನೆಕರ ಅವರುಗಳು ತಮ್ಮ ಸಂಪೂರ್ಣ ಬೆಂಬಲ ಸೂಚಿಸಿದ್ದಾರೆ.

## ಡಾ ರವಿ ಪಾಟೀಲರ ವಿಜೃಂಭಣೆಯ ನಾಮಪತ್ರ ಸಲ್ಲಿಕೆ



ಬೆಳಗಾವಿ : ಗುರುವಾರ ದಿನಾಂಕ 20 ರಂದು ನಾಮಪತ್ರಿಕೆ ಸಲ್ಲಿಸುವ ಕೊನೆಯ ದಿನವಾಗಿದ್ದು, ಬೆಳಗಾವಿಯ ಉತ್ತರ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ ರವಿ ಪಾಟೀಲ ಅವರು ಈಗಾಗಲೇ ನಾಮಪತ್ರ ಸಲ್ಲಿಸಿದ್ದು, ಈಗ ತಮ್ಮ ಜನಬೆಂಬಲದಿಂದ ಭವ್ಯವಾದ ಮೆರವಣಿಗೆಯ ಜಾಥಾ ಹಮ್ಮಿಕೊಂಡಿದ್ದರು..

ಡಾ ರವಿ ಪಾಟೀಲರ ಸಾವಿರಾರು ಬೆಂಬಲಿಗರು, ಮಹಿಳಾ ಮತ್ತು ಪುರುಷ ಕಾರ್ಯಕರ್ತರು, ಪಕ್ಷದ ಪದಾಧಿಕಾ-ರಿಗಳು, ನಗರ ಸೇವಕರು ಭಾಗಿಯಾದ ಈ ಭವ್ಯ ಹಾಗೂ ಅರ್ಥಪೂರ್ಣ ಮೆರವಣಿಗೆಯಲ್ಲಿ ಮಾರ್ಗದುದ್ದಕ್ಕೂ ಬೆಂಬಲಿಗರು ಹಾಗೂ ಸಾರ್ವಜನಿಕರು, ಬಿಜೆಪಿಗೆ, ಮೋದಿಯವರಿಗೆ, ಡಾ ರವಿ ಪಾಟೀಲ್ ಅವರಿಗೆ ಜೈಕಾರದ ಘೋಷಣೆಗಳು ಕೂಗುತ್ತಿದ್ದರು..

ಎಲ್ಲಿ ನೋಡಿದರೂ ಅಲ್ಲಿ ಬಿಜೆಪಿ ಬಾವುಟ ಮತ್ತು ಕೇಸರಿ ಕಲರವ ತುಂಬಿಕೊಂಡಿತ್ತು,

ಸೇರಿದ ಎಲ್ಲಾ ಜನರೂ ಮಾರ್ಗದುದ್ದಕ್ಕೂ ಹಾಡು, ಕುಣಿತದೊಂದಿಗೆ ಅತ್ಯಂತ ಉತ್ಸಾಹದಿಂದ ಪಾಲ್ಗೊಂಡು ಈ ಸಲದ ಚುನಾವಣೆಯಲ್ಲಿ ರವಿ ಪಾಟೀಲ ಅವರನ್ನು ಗೆದ್ದೇ ಗೆಳ್ಳಿಸುತ್ತೇವೆ ಎಂಬ ಮಾತನ್ನು ಹೇಳುತ್ತಿದ್ದರು..

ಬೆಳಿಗ್ಗೆ 10 ಗಂಟೆಗೆ ಪ್ರಾರಂಭವಾದ ಈ ಕಾರ್ಯಕ್ರಮ, ನಗರದ ಸಂಭಾಜಿ ಚೌಕದಿಂದ ಪ್ರಾರಂಭವಾಗಿ, ಕಾಲೇಜ್ ರಸ್ತೆಯ ಮೂಲಕ, ರಾಣಿ ಚನ್ನಮ್ಮ ವೃತ್ತದಿಂದ, ಆರ್ಟಿಓ ವೃತ್ತದ ಮಾರ್ಗವಾಗಿ ಸಾಗಿ, ಮಹಾನಗರ ಪಾಲಿಕೆ ತಲುಪಿತು..

ಈ ಭವ್ಯ ಮೆರವಣಿಗೆಯಲ್ಲಿ, ರಾಜ್ಯ ಬಿಜೆಪಿ ವಕ್ತಾರ ಎಂಬಿ ಜಿರಲೆ, ಮಾಜಿ ಶಾಸಕರಾದ ಅಭಯ ಪಾಟೀಲ್, ಅನಿಲ್ ಬೇನಕೆ, ಬಸವರಾಜ್ ರೊಟ್ಟಿ, ಪಕ್ಷದ ಎಲ್ಲಾ ಪದಾಧಿಕಾರಿಗಳು, ನಗರ ಸೇವಕರು, ಕಾರ್ಯಕರ್ತರು, ಸಾರ್ವಜನಿಕರು, ಬೆಂಬಲಿಗರು ಭಾಗಿಯಾಗಿದ್ದರು.

## ಕಾಂಗ್ರೆಸ್ ಅಭ್ಯರ್ಥಿ ಆಸೀಪ್ (ರಾಜು) ಸೇಠ್ ನಾಮಪತ್ರ ಸಲ್ಲಿಕೆ



ಬೆಳಗಾವಿ: ಬೆಳಗಾವಿ ಉತ್ತರ ಕ್ಷೇತ್ರದಿಂದ ವಿಧಾನಸಭೆ ಚುನಾವಣೆಗೆ ನಮ್ಮ ಕಾಂಗ್ರೆಸ್ ಪಕ್ಷದ ಅಧಿಕೃತ ಅಭ್ಯರ್ಥಿ ಆಸೀಪ್ (ರಾಜು) ಸೇಠ್ ಅವರು ಉಮೇದುವಾರಿಕೆ ಸಲ್ಲಿಸಿದರು.

ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಆಸೀಪ್ (ರಾಜು) ಸೇಠ್ ಅವರು ಇಂದು ಬೆಳಗಾವಿ ಮಹಾನಗರ ಪಾಲಿಕೆಗೆ ನೂರಾರು ಕಾರ್ಯಕರ್ತರೊಂದಿಗೆ ಆಗಮಿಸಿ ನಾಮಪತ್ರ ಸಲ್ಲಿಸಿದರು.

ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ರಾಜು ಸೇಠ ಅವರಿಗೆ ನಾಮಪತ್ರ ಸಲ್ಲಿಸಲು ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ, ಮಾಜಿ ಶಾಸಕ ಫಿರೋಜ ಸೇಠ ಅವರು ಸಾಥ್ ನೀಡಿದರು.

ಈ ವೇಳೆ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ, ಮಾಜಿ ಶಾಸಕ ಫಿರೋಜ ಸೇಠ, ಎಐಸಿಸಿ ವೀಕ್ಷಕ್ ವಿಶ್ವನಾಥನ್ ಇತರರು ಹಾಗು ನೂರಾರು ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

## ಠೇವಣಿ ಇಡಲು 10,000 ರೂ. ನಾಣ್ಯದೊಂದಿಗೆ ಬಂದ ಸ್ವತಂತ್ರ್ಯ ಅಭ್ಯರ್ಥಿ

ಕಲಬುರಗಿ: ಕರ್ನಾಟಕ ವಿಧಾನಸಭೆ ಚುನಾವಣಾ ಹಬ್ಬವು ಹಲವು ಸ್ವಾರಸ್ಯಕರ ಸಂಗತಿಗಳಿಗೆ ಸಾಕ್ಷಿಯಾಗುತ್ತಿದೆ. ಮಂಗಳವಾರ ಯಾದಗಿರಿಯಲ್ಲಿ ಪಕ್ಷೇತರ ಅಭ್ಯರ್ಥಿಯೊಬ್ಬರು ಕೇವಲ 1 ರೂಪಾಯಿ ನಾಣ್ಯಗಳಲ್ಲಿಯೇ ಹತ್ತು ಸಾವಿರ ರೂ. ಠೇವಣಿ ಕಟ್ಟಿ ಚುನಾವಣೆಗೆ ನಾಮಪತ್ರ ಸಲ್ಲಿಸಿದ್ದಾರೆ.

ಎಲ್ಲಾ ನಾಣ್ಯಗಳನ್ನು ಎಣಿಕೆ ಮಾಡಲು ಚುನಾವಣಾಧಿಕಾರಿ ಮತ್ತು ಇತರ ಮೂವರು ಅಧಿಕಾರಿಗಳು ಎರಡು ಗಂಟೆಗಳ ಕಾಲ ತೆಗೆದುಕೊಂಡರು, ಎಲ್ಲಾ ಮೊತ್ತವನ್ನು ದೃಢೀಕರಿಸಿ ಮತ್ತು ಅವರ ನಾಮನಿರ್ದೇಶನವನ್ನು ಸ್ವೀಕರಿಸಿದರು.

ಚುನಾವಣೆಗೆ ಸ್ಪರ್ಧಿಸಲು 10 ಸಾವಿರ ರೂಪಾಯಿ ಠೇವಣಿ ಇಡುವುದು



ಕಡ್ಡಾಯವಾಗಿದೆ. ಈ ರೀತಿ ಕಡ್ಡಾಯವಾಗಿ ಠೇವಣಿ ಇಡುವ 10 ಸಾವಿರ ರೂಪಾಯಿಯನ್ನುಯಂಕಪ್ಪ ನಾಣ್ಯದ ರೂಪದಲ್ಲಿ ತಂದಿದ್ದು ಅಧಿಕಾರಿಗಳನ್ನ ತಬ್ಬಿಬ್ಬುಗೊಳಿಸಿತ್ತು.

ನಿಜವಾದ ಪ್ರಜಾಪ್ರಭುತ್ವ ತರುವ ಗುರಿ ಹೊಂದಿರುವ ಅಭ್ಯರ್ಥಿ ಯಂಕಪ್ಪ ಮಾತನಾಡಿ, ಕಳೆದ ವರ್ಷ ಮನೆ ತೊರೆದು ಕ್ಷೇತ್ರದ ಎಲ್ಲ ಗ್ರಾಮಗಳಲ್ಲಿ ವಾಸ್ತವ್ಯ ಹೂಡಿದ್ದೇನೆ. ತಮ್ಮ ಗ್ರಾಮ ವಾಸ್ತವ್ಯದ ಸಮಯದಲ್ಲಿ, ಅವರು ಪ್ರಜಾಪ್ರಭುತ್ವದ ಪ್ರಾಮುಖ್ಯತೆ ಮತ್ತು ಚುನಾವಣಾ ಪ್ರಕ್ರಿಯೆಯಲ್ಲಿ ಅವರ ಭಾಗವಹಿಸುವಿಕೆಯ ಮೌಲ್ಯದ ಬಗ್ಗೆ ಗ್ರಾಮಸ್ಥರಿಗೆ ಶಿಕ್ಷಣ ನೀಡಿದರು.

ರಾಮಸಂದ್ರದ ಯಂಕಪ್ಪ ಅವರು ಪ್ರತಿ ಮನೆಯಿಂದ ಒಂದು ನಾಣ್ಯವನ್ನು ಸಂಗ್ರಹಿಸಿದರು, ಆಹಾರಕ್ಕಾಗಿ ಭಿಕ್ಷೆ ಬೇಡಿದರು ಮತ್ತು ಹಳ್ಳಿಗಳಲ್ಲಿನ ದೇವಾಲಯಗಳಲ್ಲಿ ತಂಗುತ್ತಿದ್ದರು. ಹೆಚ್ಚಿನ ಹಣ ನೀಡಲು ಅನೇಕರು ಮುಂದೆ ಬಂದರೂ ಅವರು ಒತ್ತಾಯಿಸಿ ಪ್ರತಿ ಮನೆಯಿಂದ 1 ರೂಪಾಯಿ ನಾಣ್ಯವನ್ನು ಮಾತ್ರ ಸಂಗ್ರಹಿಸಿದರು ಎಂದು ಅವರು ಹೇಳಿದರು.

ಯಂಕಪ್ಪ ಸ್ವತಃ ಪ್ರಚಾರ ನಡೆಸಿ, ತಾವು ಆಯ್ಕೆಯಾದರೆ ಗ್ರಾಮಗಳ ಅಭಿವೃದ್ಧಿಗೆ ಶ್ರಮಿಸುವುದಾಗಿ ಗ್ರಾಮಸ್ಥರಿಗೆ ಭರವಸೆ ನೀಡಿದರು. ಪ್ರತಿ ಹಳ್ಳಿಗೆ ಉತ್ತಮ ಶಾಲೆ ಮತ್ತು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಗುತ್ತದೆ ಎಂದು ಭರವಸೆ ನೀಡಿದರು.

ಪ್ರತಿಯೊಂದು ನಾಣ್ಯವು ಒಂದು ಕುಟುಂಬವನ್ನು ಪ್ರತಿನಿಧಿಸುತ್ತದೆ ಎಂದು ಯಂಕಪ್ಪ ಹೇಳಿದರು. ಅವರಿಗೆ ನಾಣ್ಯವನ್ನು ನೀಡಿದ ಎಲ್ಲಾ ಕುಟುಂಬಗಳ ಸದಸ್ಯರು ತಮ್ಮ ಪರವಾಗಿ ತಮ್ಮ ಹಕ್ಕು ಚಲಾಯಿಸಿದರೆ, ಅವರ ಆಯ್ಕೆ ಖಚಿತ. ಯಂಕಪ್ಪ ಅವರು ತಮ್ಮ ಪ್ರಣಾಳಿಕೆಯ ಭಿತ್ತಿ ಪತ್ರವನ್ನು ಕೊರಳಿಗೆ ಹಾಕಿಕೊಂಡಿದ್ದು, ತಾವು ಆಯ್ಕೆಯಾದರೆ ಏನು ಮಾಡುತ್ತೇನೆ ಎಂಬುದನ್ನು ಮತದಾರರು ತಿಳಿದುಕೊಳ್ಳಲು ಬಯಸಿದ್ದಾರೆ.

## ಮೂಡಾ, ವಕ್ಫ್ ಅಧ್ಯಕ್ಷರು ಸೇರಿದಂತೆ ಬಿಜೆಪಿ, ಜೆಡಿಎಸ್ ಮುಖಂಡರು ಕಾಂಗ್ರೆಸ್ ಸೇರ್ಪಡೆ

ಬೆಂಗಳೂರು: ಬಿಜೆಪಿ ಹಾಗೂ ದಳವನ್ನು ತೊರೆದು ಅನೇಕ ನಾಯಕರು ಕಾಂಗ್ರೆಸ್ ಸೇರ್ಪಡೆಯಾಗಿ, ಮೈಸೂರು ಹಾಗೂ ರಾಜ್ಯದ ಇತರೆ ಭಾಗಗಳಲ್ಲಿ ಬದಲಾವಣೆ ಬಯಸಿದ್ದಾರೆ. ವಿ. ಸೋಮಶೇಖರ್ ಅವರು ಸಿದ್ದರಾಮಯ್ಯ ಅವರ ಜತೆ ಶಾಸಕರಾಗಿ ಮಂತ್ರಿಯಾಗಿ ಕೆಲಸ ಮಾಡಿದ್ದಾರೆ. ಶಿಕ್ಷಣ ಕ್ಷೇತ್ರದಲ್ಲಿ ಅವರದೇ ಆದ ಸಾಧನೆ ಮಾಡಿದ್ದಾರೆ.

ಬಿಜೆಪಿ ಸಂವಿಧಾನದ ವಿರುದ್ಧವಾಗಿ ನಡೆದುಕೊಳ್ಳುತ್ತಿದ್ದು, ರಾಜ್ಯದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದೆ. ನಮ್ಮಂತಹವರಿಗೆ ಬಿಜೆಪಿಯಲ್ಲಿ ಸ್ಥಾನವಿಲ್ಲ. ದೇಶದ ಹಿತಕ್ಕಾಗಿ ಯಾವುದೇ ಷರತ್ತು ಇಲ್ಲದೆ, ಮಲ್ಲಿಕಾರ್ಜುನ ಖರ್ಗೆ ಅವರ



ನಾಯಕತ್ವ ಹಾಗೂ ಪಕ್ಷದ ಸಿದ್ಧಾಂತವನ್ನು ಒಪ್ಪಿ ಕಾಂಗ್ರೆಸ್ ಸೇರುತ್ತಿದ್ದಾರೆ. ಅವರನ್ನು ತುಂಬು ಹೃದಯದಿಂದ ಪಕ್ಷಕ್ಕೆ ಸೇ-ರಿಸಿಕೊಳ್ಳುತ್ತಿದ್ದೇವೆ.

ಬಿಜೆಪಿ ಸರ್ಕಾರ ರಾಜ್ಯ ವಕ್ಫ್ ಬೋರ್ಡ್ ಅಧ್ಯಕ್ಷರಾಗಿದ್ದ ಆಸೀಫ್ ಸೇಠ್ ಅವರು ತಮ್ಮ ಸ್ಥಾನಕ್ಕೆ ರಾಜೀನಾಮ ನೀಡಿ ಕಾಂಗ್ರೆಸ್ ಸೇರುತ್ತಿದ್ದಾರೆ. ಬಿಜೆಪಿ ಆಡಳಿತದಲ್ಲಿ ಅಲ್ಪಸಂಖ್ಯಾತರಿಗೆ ಬಹಳ ತೊಂದರೆ ಆಗಿದೆ. ಇಷ್ಟೆಲ್ಲಾ ಆದ ನಂತರ ನಾನು ಯಾವ ಮುಖ ಇಟ್ಟುಕೊಂಡು ಬಿಜೆಪಿಯಲ್ಲಿ ಮುಂದುವರಿಯಲಿ ಎಂದು ನಮ್ಮ ಜತೆ ಚರ್ಚೆ ಮಾಡಿ ಕಾಂಗ್ರೆಸ್ ಸೇರುತ್ತಿದ್ದಾರೆ.

ಬಸವೇಗೌಡರು ಮೂಡಾ ಅಧ್ಯಕ್ಷರಾಗಿದ್ದರು, ಅವರು ಅನೇಕ ಸಹಕಾರಿ ಸಂಸ್ಥೆಗಳಲ್ಲಿ ಕೆಲಸ ಮಾಡಿದ್ದಾರೆ. ಅವರೂ ಕೂಡ ಇಂದು ಕಾಂಗ್ರೆಸ್ ಸೇರುತ್ತಿದ್ದಾರೆ.

ಅಬ್ದುಲ್ ಅಜೀಜ್ ಅವರು 2018ರಲ್ಲಿ ದಳದ ಅಭ್ಯರ್ಥಿಯಾಗಿದ್ದರು. ಅವರು ಕೂಡ ಇಂದು ಬೇಷರತ್ತಾಗಿ ಕಾಂಗ್ರೆಸ್ ಸೇರುತ್ತಿದ್ದಾರೆ. ಹೀಗೆ ಅನೇಕ ನಾಯಕರು ಪಕ್ಷ ಸೇರುತ್ತಿದ್ದು, ನಾವು ಎಲ್ಲಾ ನಾಯಕರನ್ನು ಹೃದಯಪೂರ್ವಕವಾಗಿ ಪಕ್ಷಕ್ಕೆ ಸೇರಿಸಿಕೊಳ್ಳುತ್ತೇವೆ.

ಇದಕ್ಕೂ ಮುನ್ನ ಸದಾಶಿವನಗರದಲ್ಲಿ ಕಾಂಗ್ರೆಸ್ ಪಕ್ಷದಿಂದ ಯಾರೇ ನಿಂತರೂ ನನ್ನನ್ನು ಸೋಲಿಸಲು ಸಾಧ್ಯವಿಲ್ಲ ಎಂಬ ಮುಖ್ಯಮಂತ್ರಿ ಹೇಳಿಕೆ ಬಗ್ಗೆ ಮಾಧ್ಯಮಗಳು ಕೇಳಿದ ಪ್ರಶ್ನೆಗೆ ಉತ್ತ-ರಿಸಿದ ಶಿವಕುಮಾರ್ ಅವರು, 'ಯಾರು ಏನಾದರೂ ಹೇಳಿಕೊಳ್ಳಲಿ. ಅಲ್ಪಸಂಖ್ಯಾತರೂ ಸೇರಿದಂತೆ ನಮ್ಮ ಪಕ್ಷಕ್ಕೆ ಎಲ್ಲಾ ಸಮುದಾಯದವರು ಬೇಕು. ರಾಜ್ಯದಲ್ಲಿ ಶಏ.99ರಷ್ಟು ಅಲ್ಪಸಂಖ್ಯಾತರು ಕಾಂಗ್ರೆಸ್ ಗೆ ಬೆಂಬಲ ನೀಡುತ್ತಿದ್ದಾರೆ. ಈ ಭಾಗದಲ್ಲಿ ಕಳೆದ 4 ಬಾರಿಯಿಂದಲೂ ಅಲ್ಪಸಂಖ್ಯಾತರಿಗೆ ಟಿಕೆಟ್ ನೀಡುತ್ತಾ ಬಂದಿದ್ದು, ಈಗಲೂ ನೀಡಿದ್ದೇವೆ. ಸ್ಥಳೀಯರಿಗೆ ಟಿಕೆಟ್ ನೀಡಬೇಕು ಎಂದು ಕಾರ್ಯಕರ್ತರು ಕೇಳಿದ ಹಿನ್ನೆಲೆಯಲ್ಲಿ ಅಭ್ಯರ್ಥಿ ಬದಲಿಸಿದ್ದೇವೆ' ಎಂದು ತಿಳಿಸಿದರು.

### ಹೈಕಮಾಂಡ್ ಆದೇಶವೇ ಅಂತಿಮ, ಸ್ಪರ್ಧೆ ಮಾಡುವುದಿಲ್ಲ ಎಂದ ಉಮಾಶ್ರೀ



ರಬಕವಿ-ಬನಹಟ್ಟಿ : ಇದೀಗ ಪಕ್ಷದ ಹೈಕಮಾಂಡ್ ಆದೇಶಕ್ಕೆ ತಲೆಬಾಗಿ ಈ ಬಾರಿ ತೇರದಾಳ ಕ್ಷೇತ್ರದಿಂದ ಪಕ್ಷ ಅಥವಾ ಪಕ್ಷೇತರವಾಗಿಯೂ ಸ್ಪರ್ಧೆ ಮಾಡುವದಿಲ್ಲವೆಂದು ಮಾಜಿ ಸಚಿವೆ ಉಮಾಶ್ರೀ ಸ್ಪಷ್ಟಪಡಿಸಿದರು.

ಬನಹಟ್ಟಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ದು ಕೊಣ್ಣೂರ ನಮ್ಮ ಪಕ್ಷದ ಅಭ್ಯರ್ಥಿ. ಪಕ್ಷದ ನಾಯಕಿಯಾಗಿ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯನ್ನು ಬೆಂಬಲಿಸುವುದು ನನ್ನ ಕರ್ತವ್ಯವಾಗಿದೆ. ನಮ್ಮ ಪಕ್ಷದ ಅಭ್ಯರ್ಥಿ ಮುಂದಿನ ದಿನಗಳಲ್ಲಿ ಪಕ್ಷದ ಇತರೆ ನಾಯಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುತ್ತಾರೆ. ರಾಜಕೀಯದಲ್ಲಿ ಸ್ಥಿತ್ಯಾಂತರಗಳು ಮತ್ತು ಬದಲಾವಣೆಗಳು ಸಾಮಾನ್ಯ ಎಂದು ಉಮಾಶ್ರೀ ತಿಳಿಸಿದರು.

ವರಿಷ್ಠರು ಪಕ್ಷದ ಪರವಾಗಿ ಸಿದ್ದು ಕೊಣ್ಣೂರ ಅವರಿಗೆ ಬಿ ಫಾರ್ಮ್ ನೀಡಿದೆ. ಮೇಲಿನಿಂದ ಬಂದ ಆದೇಶದಂತೆ ಕ್ಷೇತ್ರದ ಎಲ್ಲ ಕಾರ್ಯಕರ್ತರೂ, ಮುಖಂಡರು ಸೇರಿ ಅಭ್ಯರ್ಥಿ ಗೆಲುವಿಗೆ ಶ್ರಮಿಸುತ್ತೇವೆ. ಇನ್ನೆರಡು ದಿನಗಳಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಪಕ್ಷ ಗೆಲ್ಲಿಸುವ ಕೆಲಸದಲ್ಲಿ ತೊಡಗುತ್ತೇವೆಂದು ಉಮಾಶ್ರೀ ತಿಳಿಸಿದರು.

## ಅಥಣಿ, ಕಾಗವಾಡ ಮತಕ್ಷೇತ್ರಕ್ಕೆ ಸಾಮಾನ್ಯ ಪರಿವೀಕ್ಷಕರ ನೇಮಕ

ಬೆಳಗಾವಿ: ಕರ್ನಾಟಕ ವಿಧಾನಸಭೆ ಸಾರ್ವತ್ರಿಕ ಚುನಾವಣೆ–2023 ರ ಹಿನ್ನೆಲೆಯಲ್ಲಿ 03–ಅಥಣಿ 04–ಕಾಗವಾಡ ಮತಕ್ಷೇತ್ರಕ್ಕೆ ಸಾಮಾನ್ಯ ಪರಿವೀಕ್ಷಕರಾಗಿ (General Observer) ನವೀನ ಕುಮಾರ ಜಿ.ಎಸ್. ಐ.ಎ.ಎಸ್ ಉ–18420, ಅಖಗಕ ಇವರನ್ನು ನೇಮಿಸಲಾಗಿದೆ. ಏಪ್ರಿಲ್.19 2023 ರಿಂದ ಇವರು ಕರ್ತವ್ಯಕ್ಕೆ ಹಾಜರಾಗಿದ್ದು, ಈ ಕ್ಷೇತ್ರದ ಸಾರ್ವಜನಿಕ ದೂರು ಮತ್ತು ಸಲಹೆ ಸೂಚನೆಗಳಿಗಾಗಿ ಸಂಪರ್ಕಿಸಬೇಕಾದ ವಿಳಾಸ: ನವೀನ ಕುಮಾರ ಜಿ.ಎಸ್. ಐ.ಎ.ಎಸ್ G-18420, CSUP ಮೊ.ಸಂ 7204913637, ಇಮೇಲ್ ವಿಳಾಸ 0304go2023@gmail.com, ಕೊಠಡಿ ಸಂ. 01 ಅಥಣಿ ಆಯ್‌ಬಿ, .ಬೆಳಗಾವಿ ಜಿಲ್ಲೆ. ಬೆಳಿಗ್ಗೆ 10 ಗಂಟೆಯಿಂದ 11 ಗಂಟೆಯವರೆಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಚುನಾವಣಾ ವೆಚ್ಚ ವೀಕ್ಷಕರು ಸಾರ್ವಜನಿಕರ ಭೇಟಿಗೆ ಲಭ್ಯ

ಬೆಳಗಾವಿ: ಕರ್ನಾಟಕ ವಿಧಾನಸಭೆ ಸಾರ್ವತ್ರಿಕ ಚುನಾವಣೆ–2023 ರ ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲೆಯ ವಿಧಾನಸಭಾ ಮತಕ್ಷೇತ್ರಕ್ಕೆ ಚುನಾವಣಾ ಆಯೋಗದಿಂದ ನೇಮಿಸಲಾಗಿರುವ ಚುನಾವಣಾ ವೆಚ್ಚ ವೀಕ್ಷಕರು ಸಾರ್ವಜನಿಕರ ಭೇಟಿಗೆ ಲಭ್ಯವಿರುತ್ತಾರೆ ಎಂದು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಚುಣಾವನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮತಕ್ಷೇತ್ರ ಹಾಗೂ ಚುನಾವಣಾ ವೆಚ್ಚ ವೀಕ್ಷಕರ ವಿವರ: 01–ನಿಪ್ಪಾಣಿ ಮತಕ್ಷೇತ್ರದ ವೆಚ್ಚ ವೀಕ್ಷಕರು ಉಂದೆ ಯೋಗೇಶ ಪಾಂಡುರಂಗ ಖಖಖ(ಅ&ಅಇ) ಮೊ.ಸಂ 810568426, ಪಿ.ಡಬ್ಲೂಡಿ ಐ.ಬಿ.ನಿಪ್ಪಾಣಿ ವಿ.ಐ.ಪಿ ಸೂಟ್ ನಂ–2 ವಸತಿ ಗೃಹದಲ್ಲಿ ಬೆಳಿಗ್ಗೆ 10 ಗಂಟೆಯಿಂದ 11 ರ ವರೆಗೆ ಭೇಟಿಯಾಗಬಹುದು.

## ಬೆಳಗಾವಿ ಉತ್ತರ ಮತ್ತು ದಕ್ಷಿಣ ಮತಕ್ಷೇತ್ರಗಳಿಗೆ ಸಾಮಾನ್ಯ ಪರಿವೀಕ್ಷಕರ ನೇಮಕ

ಬೆಳಗಾವಿ: ಕರ್ನಾಟಕ ವಿಧಾನಸಭೆ ಸಾರ್ವತ್ರಿಕ ಚುನಾವಣೆ–2023 ರ ಹಿನ್ನೆಲೆಯಲ್ಲಿ 11–ಬೆಳಗಾವಿ ಉತ್ತರ ಮತ್ತು 12–ಬೆಳಗಾವಿ ದಕ್ಷಿಣ ಮತಕ್ಷೇತ್ರಗಳಿಗೆ ಸಾಮಾನ್ಯ ಪರಿವೀಕ್ಷಕರಾಗಿ (General Observer) ಪಂಕಜ ಯಾದವ್ ಐ.ಎ.ಎಸ್ ಇವರನ್ನು ನೇಮಿಸಲಾಗಿದೆ. ಏಪ್ರಿಲ್.19 2023 ರಿಂದ ಇವರು ಕರ್ತವ್ಯಕ್ಕೆ ಹಾಜರಾಗಿದ್ದು, ಈ ಕ್ಷೇತ್ರದ ಸಾರ್ವಜನಿಕ ದೂರು ಮತ್ತು ಸಲಹೆ ಸೂಚನೆಗಳಿಗಾಗಿ ಸಂಪರ್ಕಿಸಬೇಕಾದ ವಿಳಾಸ: ಪಂಕಜ ಯಾದವ್ ಐ.ಎ.ಎಸ್, ಮೊ.ಸಂ 7899419697, ಇಮೇಲ್ ವಿಳಾಸ: 1112go2023@gmail.com, ಕೊಠಡಿ ಸಂ. 01 ಹೊಸ ಸರ್ಕ್ಯೂಟ್ ಹೈಸ್, ಕಫಾಳ ಖಃ ಬೆಳಗಾವಿ. ಬೆಳಿಗ್ಗೆ 10 ಗಂಟೆಯಿಂದ 11 ಗಂಟೆಯವರೆಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ವಿದ್ಯುತ್ ಗ್ರಾಹಕರ ಬಿಲ್ಲು ಪಾವತಿಗಾಗಿ ಆನ್ ಲೈನ್ ಸೇವೆಗಳು ತಾತ್ಕಾಲಿಕವಾಗಿ ಸ್ಥಗಿತ

ಬೆಳಗಾವಿ: ಬೆಳಗಾವಿ ನಗರದ ವಿದ್ಯುತ್ ಗ್ರಾಹಕರ ವಿದ್ಯುತ್ ಬಿಲ್ಲು ಪಾವತಿಗಾಗಿ ಆನ್ ಲೈನ್ ಸೇವೆಗಳಾದ, ಗೂಗಲ್ ಪೇ, ಫೋನ್ ಪೇ, ಪೇ ಟಿಎಮ್ ಹಾಗೂ ಇನ್ನಿತರ ಸೇವೆಗಳು ತಾತ್ಕಾಲಿಕವಾಗಿ ಲಭ್ಯವಿಲ್ಲದೇ ಇರುವುದರಿಂದ ಈ ಕೆಳಗೆ ನಮೂದಿಸಿದ ಸೇವೆಗಳ ಮುಖಾಂತರ ವಿದ್ಯುತ್ ಬಿಲ್ಲು ಪಾವತಿಸಬಹುದು ಎಂದು ಕಾರ್ಯ ಮತ್ತು ಪಾಲನೆ, ನಗರ ವಿಭಾಗ, ಕಾರ್ಯ ನಿರ್ವಾಹಕ ಅಭಿಯಂತರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯ ವೆಬ್ ಸೈಟ್ https://www.hescom.co.in/SCP/Myhome.aspx, ಬೆಳಗಾವಿ ಒನ್, ನಗರ ಉಪ ವಿಭಾಗ–1, 2 & 3 ರ ನಗದು ಕೌಂಟರಗಳು ಹಾಗೂ ಎ.ಟಿ.ಪಿ ಕೌಂಟರಗಳು : ನಗರ ಉಪ ವಿಭಾಗ–1, 2 & 3 ಕಚೇರಿಗಳಲ್ಲಿ,, ಬೆಳಗಾವಿಯ ಖಂಜರಗಲ್ಲಿ, ಖಾಸಬಾಗ, ಗೋವಾವೇಸ್, ಶಹಾಪೂರ, ಉದ್ಯಮಬಾಗ ಇಲ್ಲಿ ವಿದ್ಯುತ್ ಬಿಲ್ಲು ಪಾವತಿಸಬಹುದು.

## ಸಂಡೂರು ಜೆಡಿಎಸ್ ಅಭ್ಯರ್ಥಿ ಸೋಮಪ್ಪ ನಾಮಪತ್ರ ಸಲ್ಲಿಕೆ



ಸಂಡೂರು: ಬಳ್ಳಾರಿ ಜಿಲ್ಲೆಯ ಸಂಡೂರಿನಲ್ಲಿ ಅತಿ ಹೆಚ್ಚು ಆಡಳಿತ ನಡೆಸಿದ ಕಾಂಗ್ರೆಸ್ ಪಕ್ಷದಿಂದ ಪ್ರಜೆಗಳು ಭ್ರಮನಿರಸನ ಹೊಂದಿದ್ದಾರೆ, ಕುಮಾರಣ್ಣನವರ ಕಾರ್ಯ ಪ್ರತಿ ಮನೆಯ ಸದಸ್ಯರು ಇಂದಿಗೂ ಸ್ಮರಿಸುತ್ತಿದ್ದಾರೆ, ಅವರ ಪಂಚರತ್ನ ಯೋಜನೆಯನ್ನು ಅರಿತಿದ್ದಾರೆ.

ಅಲ್ಲದೆ ರಾಜ್ಯದಲ್ಲಿ ಮಹತ್ತರ ಬದಲಾವಣೆಗಳಾಗುತ್ತಿವೆ ಪರಿಣಾಮ ಸಂಡೂರು ಕ್ಷೇತ್ರದ ಜನತೆ ಈ ಬಾರಿ ಜೆ.ಡಿ.ಎಸ್. ಪಕ್ಷದ ಕೈ ಹಿಡಿಯಲಿದ್ದಾರೆ ಎಂದು ಜೆ.ಡಿ.ಎಸ್. ಅಭ್ಯರ್ಥಿ ಎನ್. ಸೋಮಪ್ಪ ತಿಳಿಸಿದರು.

ಅವರು ಪಟ್ಟಣದಲ್ಲಿ ಬೃಹತ್ ಮೆರವಣಿಗೆಯ ಮೂಲಕ ಸಾಗಿ ಪತ್ನಿ ಸಮೇತರಾಗಿ ಅಗಮಿಸಿ ತಹಶೀಲ್ದಾರ್ ಕಛೇರಿಯಲ್ಲಿ ನಾಮಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ನೂರಾರು ಕಾರ್ಯಕರ್ತರು ಅಗಮಿಸಿ ತಮ್ಮ ಪಕ್ಷದ ಶಕ್ತಿ ಪ್ರದರ್ಶನ ಮತ್ತು ಮೆರವಣಿಗೆ ಅದ್ದೂರಿಯಾಗಿ ನಡೆಸಿ ನಂತರ ಚುನಾವಣಾಧಿಕಾರಿ ಶರಣಬಸಪ್ಪ ಅವರಿಗೆ ನಾಮಪತ್ರ ಸಲ್ಲಿಸಿದರು.

# ಡಬಲ್ ಇಂಜಿನ್ ಸರ್ಕಾರದ ಅಭಿವೃದ್ಧಿ ಕಾರ್ಯದ ಮುಂದೆ ಕಾಂಡದ ನೆಲಕಚ್ಚಲಿದೆ: ಅರುಣ ಸಿಂಗ್



ಬೆಳಗಾವಿ: ರಾಜ್ಯದಲ್ಲಿ ಡಬಲ್ ಇಂಜಿನ್ ಸರ್ಕಾರ ಮಾಡಿರುವ ಅಭಿವೃದ್ಧಿ ಕಾರ್ಯಗಳ ಮುಂದೆ ಗ್ಯಾರಂಟಿ ಕಾರ್ಡ ಹಂಚುತ್ತಿರುವ ಕಾಂಗ್ರೆಸ್ ನೆಲಕಚ್ಚಲಿದೆ ಎಂದು ರಾಜ್ಯ ಉಸ್ತುವಾರಿ ಅರುಣ ಸಿಂಗ್ ಭವಿಷ್ಯ ನುಡಿದರು.

ಗುರುವಾರ ಬೆಳಗಾವಿ ವಿಭಾಗದ ಬಿಜೆಪಿ ಮಾಧ್ಯಮ ಕೇಂದ್ರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ರಾಜ್ಯದಲ್ಲಿ ಹಾಗೂ ಜಿಲ್ಲೆಯಾದ್ಯಂತ ನಡೆದಿರುವ ರೈಲ್ವೆ ನಿಲ್ದಾಣದ ಆಧುನಿಕರಣ, ಹೆದ್ದಾರಿಗಳ ಕಾಮಗಾರಿ, ಹೆಲಿಕಾಪ್ಟರ್ ತಯಾರಿಕಾ ಘಟಕ, ಐಐಟಿ ಉದ್ಘಾಟನೆಯಾಗಿದ್ದು ರೈತ ವಿದ್ಯಾನಿಧಿ, ಕಿತ್ತೂರು ಕರ್ನಾಟಕ ನಿಗಮ, ಲಿಂಗಾಯತ ಮತ್ತು ಮರಾಠ ನಿಗಮಗಳ ಸ್ಥಾಪನೆ ಹಿಂದುಳಿದ ಅನೇಕ ಸಮಾಜಗಳ ಅಭಿವೃದ್ಧಿ ನಿಗಮ ಸ್ಥಾಪನೆ, ಬಸವಣ್ಣನವರ ಅನುಭವ ಮಂಟಪದ ನಿರ್ಮಾಣ, ರಾಣಿ ಚನ್ನಮ್ಮಾಜಿಯ ಕೋಟೆ ನಿರ್ಮಾಣ ನಡೆದಿರುವದು ಹಾಗೂ ಎಸ್ಸಿ.ಎಸ್ಟಿ ಮಿಸಲಾತಿ ಹೆಚ್ಚಳ, ಲಿಂಗಾಯತ ಮತ್ತು ಒಕ್ಕಲಿಗ ಸಮಾಜಕ್ಕೆ 2ಡಿ, 2ಸಿ ನೀಡುವ ಮೂಲಕ ಸಾಮಾಜಿಕ ನ್ಯಾಯ ನೀಡಿದ ಬಿಜೆಪಿ ಸರ್ಕಾರದ ಸಾಧನೆಗಳನ್ನ ಮುಂದಿಟ್ಟುಕೊಂಡು ಜನತೆಯ ಮುಂದೆ ಮತಯಾಚನೆ ಮಾಡುತ್ತೆವೆ. ಹತ್ತು ಜನ ಸ್ಟಾರ್ ಪ್ರಚಾರಕರು ಸಿಗದೆ ಕಾಂಗ್ರೆಸ್ ಪಕ್ಷ ದಿವಾಳಿಯಾಗಿದ್ದು ಸಮಾಜದಲ್ಲಿ ಗಲಬೆ ನಡಸಿ ಹತ್ತು ಹಲವಾರು ಪ್ರಕರಣದಲ್ಲಿ ಭಾಗಿಯಾದ ವ್ಯಕ್ತಿಗಳು ಚುನಾವಣೆಯ ಪ್ರಚಾರಕರಾಗಿರುವದು ಅದರ ಅಂದ ಪತನದ ದಾರಿ ತೊರಿಸುತ್ತದೆ. ಇಂತಹ ಪಕ್ಷಕ್ಕೆ ಸೇರಿ ಬಿಜೆಪಿ ನಾಯಕರ ಬಗ್ಗೆ ಅಪವಾದ ಮಾಡುತ್ತಿರುವದು ಮಹಾ ಪಾಪದ ಕೆಲಸ. ಕುಟುಂಬವನ್ನು ಬಿಟ್ಟು ದೇಶಕ್ಕಾಗಿ ಜೀವನವನ್ನೆ ದಾರಿ ಎರೆದು ಪಕ್ಷ ಕಟ್ಟುತ್ತಿರುವವವರು ಬಗ್ಗೆ ಟೀಕೆ ಮಾಡುವದು ಸರಿಯಾದ ಮಾರ್ಗವಲ್ಲ ಎಂದು ಶೆಟ್ಟರ್ ಹಾಗೂ ಸವದಿಯವರಿಗೆ ಟಾಂಗ್ ನೀಡಿದರು. ಪತ್ರಿಕಾ ಗೋಷ್ಠಿಯಲ್ಲಿ ಮಹಾರಾಷ್ಟ್ರ ರಾಜ್ಯದ ಉನ್ನತ ಶಿಕ್ಷಣ ಹಾಗೂ ವೈದ್ಯಕೀಯ ಸಚಿವ ಗೀರಿಷ ಮಹಾಜನ, ರಾಜ್ಯ ವಕ್ತಾರರಾದ ಎಮ್.ಬಿ.ಝಿರಲಿ, ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಮಾಧ್ಯಮ ಸಂಚಾಲಕ ಎಪ್.ಎಸ್.ಸಿದ್ದನಗೌಡರ ಇದ್ದರು.

## ಇಂದು ದ್ವಿತೀಯ ಪಿಯುಸಿ ಪರೀಕ್ಷೆ ಫಲಿತಾಂಶ

ಬೆಂಗಳೂರು: ದ್ವಿತೀಯ ಪಿಯು ಪರೀಕ್ಷೆಯ ಉತ್ತರ ಪತ್ರಿಕೆಗಳ ಮೌಲ್ಯಮಾಪನ, ಅಂಕಗಳ ಕೂಡಿಕೆ ಕಾರ್ಯ ಪೂರ್ಣಗೊಂಡಿದ್ದು, ಇಂದು (ಏಪ್ರಿಲ್ 21) ಫಲಿತಾಂಶ ಪ್ರಕಟವಾಗಲಿದೆ ಎಂದು ಶಾಲಾ ಪರೀಕ್ಷೆ ಮತ್ತು ಮೌಲ್ಯಮಾಪನ ಮಂಡಳಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ಫಲಿತಾಂಶ ಘೋಷಣೆ ಸಂಬಂಧ ನಾಳೆ ಬೆಳಿಗ್ಗೆ 10 ಗಂಟೆಗೆ ಸುದ್ದಿಗೋಷ್ಠಿ ಕರೆಯಲಾಗಿದ್ದು, 11 ಗಂಟೆ ನಂತರ https://karresults.nic.in ಜಾಲತಾಣದಲ್ಲಿ ಫಲಿತಾಂಶ ಸಿಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

2022–23 ಶೈಕ್ಷಣಿಕ ಸಾಲಿನಲ್ಲಿ 7,27,387ವಿದ್ಯಾರ್ಥಿಗಳು ಪರೀಕ್ಷೆಗೆ ಹೆಸರು ನೋಂದಾಯಿಸಿಕೊಂಡಿದ್ದರು. ರಾಜ್ಯದ 1,109 ಕೇಂದ್ರಗಳಲ್ಲಿ ಮಾರ್ಚ್ 9ರಿಂದ 29ರವರೆಗೆ ಪರೀಕ್ಷೆಗಳು ನಡೆದಿದ್ದವು.

ವಿಧಾನಸಭಾ ಚುನಾವಣಾ ಪ್ರಕ್ರಿಯೆಗಳ ಮಧ್ಯೆಯೇ ಸರ್ಕಾರಿ ಹಾಗೂ ಖಾಸಗಿ ಕಾಲೇಜುಗಳ ಉಪನ್ಯಾಸಕರನ್ನು ಬಳಸಿಕೊಂಡು ಮೌಲ್ಯಮಾಪನ ಕಾರ್ಯವನ್ನು ಮಂಡಳಿ ಸುಸೂತ್ರವಾಗಿ ಪೂರ್ಣಗೊಳಿಸಿದೆ. ಪ್ರತಿ ವಿಷಯದಲ್ಲಿ ಬಹು ಆಯ್ಕೆ ಸೇರಿದಂತೆ ಒಂದು ಅಂಕದ 20 ಪ್ರಶ್ನೆಗಳನ್ನು ಇದೇ ಮೊದಲ ಬಾರಿ ಪರಿಚಯಿಸಲಾಗಿತ್ತು. ರಸಾಯನ ವಿಜ್ಞಾನ ಹೊರತುಪಡಿಸಿ, ಉಳಿದ ಪತ್ರಿಕೆಗಳ ಕುರಿತು ಯಾವುದೇ ತಕರಾರು ಬಂದಿರಲಿಲ್ಲ. ಗ್ರಾಮೀಣ ಪ್ರದೇಶದಲ್ಲಿ ಕಲಿತ ವಿದ್ಯಾರ್ಥಿಗಳಿಗೆ ರಸಾಯನ ವಿಜ್ಞಾನ ವಿಷಯದ ಪ್ರಶ್ನೆಗಳು ತೊಡಕಾಗಿವೆ. ಸಿಬಿಎಸ್‌ಸಿ, ಐಸಿಎಸ್‌ಸಿ ಮಾದರಿ ಯಲ್ಲಿ ಪ್ರಶ್ನೆಗಳಿವೆ ಎಂದು ಕೆಲವರು ಮಂಡಳಿಗೆ ದೂರು ಸಲ್ಲಿಸಿದ್ದರು.

## ಡಿ.ಕೆ. ಶಿವಕುಮಾರ್ ನಾಮಪತ್ರ ತಿರಸ್ಕಾರಕ್ಕೆ ಕುತಂತ್ರ



ಬೆಂಗಳೂರು: ಡಿ.ಕೆ. ಶಿವಕುಮಾರ್ ಅವರನ್ನು ರಾಜಕೀಯವಾಗಿ ಮುಗಿಸಲು ಬಿಜೆಪಿ ಸರ್ಕಾರ ಕುತಂತ್ರ ನಡೆಸಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ನಾನು ಸಹ ಕನಕಪುರದಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದೇನೆ ಎಂದು ಸಂಸದ ಡಿ.ಕೆ. ಸುರೇಶ್ ತಿಳಿಸಿದರು.

ಕನಕಪುರದಲ್ಲಿ ಗುರುವಾರ ನಾಮಪತ್ರ ಸಲ್ಲಿಕೆ ಬಳಿಕ ಮಾಧ್ಯಮಗಳ ಜೊತೆ ಅವರು ಮಾತನಾಡಿದರು. ಡಿ.ಕೆ. ಶಿವಕುಮಾರ್ ಅವರ ನಾಮಪತ್ರ ಕ್ರಮಬದ್ಧವಾಗಿದೆ. ಆದರೆ ಕುತಂತ್ರ ನಡೆಸಿ ಅವರ ನಾಮಪತ್ರ ತಿರಸ್ಕೃತ ಆಗಲೂ ಬಹುದು. ಆ ಮಾಹಿತಿ ಇರುವ ಕಾರಣ ನಾನು ಸಹ ಕಾಂಗ್ರೆಸ್ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದೇನೆ ಎಂದರು.

ಚುನಾವಣಾ ಆಯೋಗದ ಅಧಿಕಾರಿಗಳೂ ಸಹ ಸರ್ಕಾರಿ ಅಧಿಕಾರಿಗಳೇ ಆಗಿದ್ದಾರೆ. ಅವರು ಸರ್ಕಾರದ ಸೂಚನೆಯಂತೆ ಏನು ಬೇಕಾದರೂ ಮಾಡಬಹುದು. ಹೀಗಾಗಿ ನಾವು ಸಹ ಎಚ್ಚರಿಕೆ ಇಟ್ಟಿದ್ದೇವೆ. ಮುಂದಿನ ಬೆಳವಣಿಗೆಗಳನ್ನು ನೀವೇ ಕಾದು ನೋಡಿ ಎಂದರು.

ಪದ್ಮನಾಭ ನಗರದಲ್ಲಿ ನಾನು ಸ್ಪರ್ಧೆ ಮಾಡುವುದಿಲ್ಲ ಎಂದು ಇದೇ ವೇಳೆ ಅವರು ಸ್ಪಷ್ಟನೆ ನೀಡಿದರು.

## ಈ ಬಾರಿ ತುಕಾರಾಮ್ ಗೆಲುವು ಖಚಿತ



ಸಂಡೂರು: ಜನರ ಸೇವೆಯೇ ಜನಾರ್ಧನನ ಸೇವೆ ಎನ್ನುವ ರೀತಿಯಲ್ಲಿ ತುಕರಾಂ 15 ವರ್ಷಗಳಿಂದ ಸಂಡೂರು ತಾಲೂಕಿನ ಜನತೆಗೆ ಬೇಕಾದ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಒದಗಿಸಿದ ಫಲವೇ ಗುರುವಾರ 40 ಸಾವಿರಕ್ಕು ಹೆಚ್ಚು ಕಾರ್ಯಕರ್ತರು ಸೇರಿರುವುದೇ ಸಾಕ್ಷಿ ಎಂದು ಮಾಜಿ ಸಚಿವ ಸಂತೋಷ್ ಎಸ್ ಲಾಡ್ ತಿಳಿಸಿದರು.

ಅವರು ಪಟ್ಟಣದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶಾಸಕ ಈ.ತುಕರಾಂ ಅವರು ನಾಮಪತ್ರ ಸಲ್ಲಿಸುವ ಪೂರ್ವದಲ್ಲಿ ಬೃಹತ್ ಮೆರವಣಿಗೆಯ ಸಂದರ್ಭದಲ್ಲಿ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿ ಕಳೆದ 20 ವರ್ಷದಲ್ಲಿ 5 ವರ್ಷಗಳ ಕಾಲ ನಾನು, ನಂತರ 15 ವರ್ಷಗಳಲ್ಲಿ ಸಂಡೂರು ತಾಲೂಕಿಗೆ ಅತಿ ಹೆಚ್ಚು ಪ್ರೌಢಶಾಲೆ, ರಸ್ತೆ, ಕಾಲೇಜು, ಉದ್ಯೋಗ ಮೇಳಾ ರಸ್ತೆಗಳ ಅಭಿವೃದ್ಧಿ ಮಾಡುವ ಮೂಲಕ ಜನರ ಜೀವನ ಮಟ್ಟ ಸುಧಾರಿಸುವಲ್ಲಿ ನಿರಂತರ ಶ್ರಮಿಸುತ್ತಿರುವ ತುಕರಾಂ ಯಾವುದೇ ದುರಾಭ್ಯಾಸಗಳಿಲ್ಲದೆ ಸಾಮಾನ್ಯರಲ್ಲಿ ಸಾಮಾನ್ಯರಾಗಿ ಕೆಲಸ ಮಾಡುತ್ತಿದ್ದು ಮತ್ತೋಮ್ಮೆ ನಿಮ್ಮ ಬೆಂಬಲ ನೀಡಬೇಕು ಎಂದರು.

ತುಕರಾಂ ಅವರು ತಮ್ಮ ಪತ್ನಿ, ಸಂತೋಷ್ ಲಾಡ್, ವಿಶ್ವಾಸ್ ಲಾಡ್, ಅಕ್ಷಯಲಾಡ್ ಸಮ್ಮುಖದಲ್ಲಿ ಮೆರವಣಿಗೆ ಸಾಗಿ ತಹಶೀಲ್ದಾರ್ ಕಛೇರಿಯಲ್ಲಿ ಚುನಾವಣಾಧಿಕಾರಿ ಶರಣಬಸಪ್ಪ ಅವರಿಗೆ ನಾಮಪತ್ರ ಸಲ್ಲಿಸಿದರು.

ಮೆರವಣಿಗೆಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರುಗಳಾದ ಏಕಾಂಬರಪ್ಪ, ಚಿತ್ರಿಕಿ ಸತೀಶ್, ತಾಲೂಕಿನ ಎಲ್ಲಾ ಕಾಂಗ್ರೆಸ್ ಕಾರ್ಯಕರ್ತರು ಉಪಸ್ಥಿತರಿದ್ದರು.



## ದರ್ಗಾದಲ್ಲಿ ಗಳಗಳನೆ ಅತ್ತ ಮಾಜಿ ಸ್ಪೀಕರ್ ರಮೇಶ್ ಕುಮಾರ್

ಕೋಲಾರ: ಮಾಜಿ ಸ್ಪೀಕರ್ ರಮೇಶ್ ಕುಮಾರ್ ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲೂಕಿನ ಮುಸ್ಲಿಂ ಮುಖಂಡನ ಆರೋಗ್ಯ ವಿಚಾರಿಸುವ ವೇಳೆ ಗಳಗಳನೇ ಕಣ್ಣೀರು ಹಾಕಿರುವ ವೀಡಿಯೋ ಎಲ್ಲೆಡೆ ವೈರಲ್ ಆಗುತ್ತಿದೆ.

ನಾಮಪತ್ರ ಸಲ್ಲಿಕೆಗೂ ಮುನ್ನ ಕಾಂಗ್ರೆಸ್ ಮುಖಂಡ ರಮೇಶ್ ಕುಮಾರ್ ಸ್ವಗ್ರಾಮ ಅಡ್ಡಗಲ್‌ನಲ್ಲಿರುವ ಮಸೀದಿಗೆ ಭೇಟಿ ನೀಡಿದ್ದರು. ಈ ವೇಳೆ ಮುಸ್ಲಿಂ ಮುಖಂಡ ಎದುರಾಗಿದ್ದಾನೆ. ಆತ ಸ್ಟ್ರೋಕ್‌ನಿಂದಾಗಿ ಅಂಗವಿಕಲನಾಗಿರುವುದನ್ನು ರಮೇಶ್ ಕುಮಾರ್ ಗಮನಿಸಿದ್ದಾರೆ. ಈ ವೇಳೆ ಆತನ ಪರಿಸ್ಥಿತಿಯನ್ನು ನೋಡಿ ಕಣ್ಣೀರು ಹಾಕಿದ್ದಾರೆ.

ರಮೇಶ್ ಕುಮಾರ್ ಕಣ್ಣೀರಿನ ವೀಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

## ಜೆಡಿಎಸ್ ಬಳ್ಳಾರಿ ನಗರ ಅಭ್ಯರ್ಥಿ ಅನಿಲ್‌ಲಾಡ್ ನಾಮಪತ್ರ ಸಲ್ಲಿಕೆ

ಬಳ್ಳಾರಿ: ಕಾಂಗ್ರೆಸ್ ತೊರೆದು ತ್ವರಿತ ಗತಿಯಲ್ಲಿ ಜೆಡಿಎಸ್ ಪಕ್ಷ ಸೇರಿರುವ ಅನಿಲ್ ಹೆಚ್.ಲಾಡ್ ತಮ್ಮ ನಾಮಪತ್ರ ಸಲ್ಲಿಸಿದರು. ಬಳ್ಳಾರಿ ನಗರ ವಿಧಾನಸಭೆಗೆ ಜೆಡಿಎಸ್ ಅಭ್ಯರ್ಥಿಯಾಗಿ ಬಿ.ಫಾರಂ ತಂದ ಲಾಡ್ ಪಕ್ಷದ ಜಿಲ್ಲಾಧ್ಯಕ್ಷರಾದ ಸೋಮಲಿಂಗನಗೌಡ, ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಮೀನಳ್ಳಿ ತಾಯಣ್ಣ ಅವರೊಂದಿಗೆ ಉಮೇದುವಾರಿಕೆ ಸಲ್ಲಿಸಿದರು. ಜೆಡಿಎಸ್ ಪಕ್ಷದ ಕಚೇರಿಯಿಂದ ನೇರವಾಗಿ ಮಹಾನಗರ ಪಾಲಿಕೆಯ ಚುನಾವಣಾಧಿಕಾರಿಗಳ ಕಚೇರಿಗೆ ಆಗಮಿಸಿದ ಅವರು, ಆಯುಕ್ತರು ಹಾಗೂ ಚುನಾವಣಾಧಿಕಾರಿ ಎಸ್.ಎನ್. ರುದ್ರೇಶ್ ಅವರಿಗೆ ನಾಮ ಪತ್ರ ಸಲ್ಲಿಸಿದರು. ಈ ಮುಂಚೆ ಹೆಚ್ ಡಿ.ಕುಮಾರಸ್ವಾಮಿ ಅವರು ಮುನ್ನಾಭಾಯ್ ಅವರಿಗೆ ಟಿಕೆಟ್ ಘೋಷಣೆ ಮಾಡಿದ್ದರು. ಬಿ.ಫಾರಂ ಕೂಡ ನೀಡಿ ಸ್ಪರ್ಧೆ ಮಾಡುವಂತೆ ಸೂಚಿಸಿದ್ದರು.



ಮುನ್ನಾಭಾಯ್ ಕೂಡ ನಾಮಪತ್ರ ಸಲ್ಲಿಸಿ ಪ್ರಚಾರ ಕಾರ್ಯಕ್ಕೆ ಸಿದ್ಧತೆ ನಡೆಸಿದ್ದರು. ದಿಢೀರ್ ಬಿ.ಫಾರಂ ಬದಲಾಗಿದ್ದು ಅನಿಲ್ ಲಾಡ್ ತಮ್ಮ ಉಮೇದುವಾರಿಕೆ ಸಲ್ಲಿಸಿದ್ದಾರೆ. ಇದೇರೀತಿ, ರಾಜ್ಯದ ವಿವಿಧ 12 ವಿಧಾನಸಭಾ ಕ್ಷೇತ್ರಗಳಲ್ಲಿ ಜೆಡಿಎಸ್ ಬಿ.ಫಾರಂ ಅನ್ನು ಬದಲಾಯಿಸಿದ್ದು ಕೆಲವೆಡೆ ಜೆಡಿಎಸ್ ಅಭ್ಯರ್ಥಿಗಳು ಅಸಮಾಧಾನಗೊಂಡಿದ್ದಾರೆ. ಅನಿಲ್ ಲಾಡ್ ಗಣಿ ಉದ್ಯಮಿಯಾಗಿರುವುದರಿಂದ, ಕಾರ್ಯಕರ್ತರನ್ನು, ಮುಖಂಡರನ್ನು ಸಂಭಾಳಿಸುವ ಶಕ್ತಿ ಹೊಂದಿರುವುದರಿಂದ ಇಲ್ಲಿನ ಜೆಡಿಎಸ್ ಆಕಾಂಕ್ಷಿ ಮುನ್ನಾಭಾಯ್ ಒಳಗೊಂಡಂತೆ ಯಾವುದೇ ಪದಾಧಿಕಾರಿಗಳು ತಮ್ಮ ಅಸಮಾಧಾನ ತೋರ್ಪಡಿಸದಿರುವುದು ಲಾಡ್‌ಗೆ ವರದಾನವಾಗಿದೆ ಎನ್ನಲಾಗಿದೆ. ಕಾಂಗ್ರೆಸ್ ಹಾಗೂ ಬಿಜೆಪಿ ಹೊರತುಪಡಿಸಿ ಜನರು ಬದಲಾವಣೆ ಬಯಸಿದ್ದಾರೆ. ಜೆಡಿಎಸ್‌ಗೆ ಜನರು ಅತ್ಯಧಿಕ ಮತಗಳನ್ನು ಹಾಕುವ ಮೂಲಕ ಗೆಲ್ಲಿಸಿಕೊಡಲಿದ್ದಾರೆ ಎಂದು ಅನಿಲ್‌ಲಾಡ್ ಈ ಸಂದರ್ಭದಲ್ಲಿ ಹೇಳಿದರು. ಪಕ್ಷದ ಮುಖಂಡರು, ಕಾರ್ಯಕರ್ತರು ಈವೇಳೆ ಉಪಸ್ಥಿತರಿದ್ದರು.

## ಬೆಳಗಾವಿಯಲ್ಲಿ ಮತ್ತೆ ಬಾಲ ಬಿಚ್ಚಿದ ಎಂಇಎಸ್ ಪುಂಡರು

ಬೆಳಗಾವಿ: ಜಿಲ್ಲೆಯಲ್ಲಿ ಎಂಇಎಸ್ ಮತ್ತೆ ಪುಂಡಾಟ ಪ್ರದರ್ಶನ ಮಾಡಿದ್ದು, ಜೈ ಮಹಾರಾಷ್ಟ್ರ ಎಂಬ ಫಲಕ ಹಿಡಿದು ನಾಡದ್ರೋಹಿ ಘೋಷಣೆ ಕೂಗಿತ್ತ ಮೆರವಣಿಗೆ ಮಾಡಿರುವಂತಹ ಘಟನೆ ನಗರದಲ್ಲಿ ನಡೆದಿದೆ.

ಗುರುವಾರ ಬೆಳಗಾವಿ ದಕ್ಷಿಣ ಕ್ಷೇತ್ರದ ಎಂಇಎಸ್ ಅಭ್ಯರ್ಥಿ ರಮಾಕಾಂತ ಕೊಂಡೊಸ್ಕರ್ ನಾಮಪತ್ರ ಸಲ್ಲಿಕೆ ಹಿನ್ನೆಲೆ ಡಾ.ಬಿ.ಆರ್. ಅಂಬೇಡ್ಕರ್ ಉದ್ಯಾನವನದಿಂದ ಮಹಾನಗರ ಪಾಲಿಕೆ ಕಚೇರಿಯವರೆಗೆ ಬೃಹತ್ ಮೆರವಣಿಗೆ ಮಾಡಿದ್ದು, ಈ ವೇಳೆ ಎಂಇಎಸ್ ಪುಂಡಾಟ ಮೆರೆದಿದೆ. ಎಂಇಎಸ್ ಮೆರವಣಿಗೆಯಲ್ಲಿ ಪುಂಡರು ಮಹಾರಾಷ್ಟ್ರ ಪರ ಘೋಷಣೆ ಕೂಗಿದ್ದಾರೆ. ಬೆಳಗಾವಿ, ಕಾರವಾರ, ನಿಪ್ಪಾಣಿ, ಬೀದರ್, ಭಾಲ್ಕಿ ಸಂಯುಕ್ತ ಮಹಾರಾಷ್ಟ್ರಕ್ಕೆ ಸೇರಬೇಕು. ರಹೆಂಗೇ ತೋ ಮಹಾರಾಷ್ಟ್ರ ಮೇ, ನಹೀ ತೋ ಜೈಲ್ ಮೇ ಎಂದು ನಾಡದ್ರೋಹಿ ಘೋಷಣೆ ಕೂಗಲಾಗಿದೆ.

ಚುನಾವಣಾ ಹೊಸ್ತಿಲಲ್ಲಿ ಭಾಷಾ ವೈಷಮ್ಯದ ವಿಷಬೀಜ ಬಿತ್ತಲು ಎಂಇಎಸ್ ಯತ್ನಿಸುತ್ತಿದೆ ಎನ್ನಲಾಗುತ್ತಿದೆ. ಭಾಷಾ ವೈಷಮ್ಯದ ವಿಷಬೀಜ ಬಿತ್ತಿ ರಾಜಕೀಯ ಅಸ್ತಿತ್ವ ಮರುವಶಕ್ಕೆ ಎಂಇಎಸ್ ಹೆಣಗಾಡುತ್ತಿದೆ. ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ಎಂಇಎಸ್ ಸೋತು ಸುಣ್ಣವಾಗಿದೆ. ಹಾಗಾಗಿ ವಿಧಾನಸಭೆ ಚುನಾವಣೆ ಹೊಸ್ತಿಲಲ್ಲಿ ಎಂಇಎಸ್ ಮತ್ತೆ ಪುಂಡಾಟ ಶುರು ಮಾಡಿಕೊಂಡಿದೆ.

## ವೀರಶೈವ ಲಿಂಗಾಯತ ಮುಖಂಡರು ಮತ್ತಿತರರು ನಾರಾ ಭರತ್ ರೆಡ್ಡಿ ಸಮ್ಮುಖದಲ್ಲಿ ಕಾಂಗ್ರೆಸ್ ಸೇರ್ಪಡೆ

ಬಳ್ಳಾರಿ: ಬಳ್ಳಾರಿ ನಗರದ ಬಸವ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ವೀರಶೈವ ಲಿಂಗಾಯತ ಸಮುದಾಯದ ಮುಖಂಡರು, ಬಿಜೆಪಿ ಮುಖಂಡ ಮಲ್ಲನಗೌಡರ ಪ್ರಮುಖ ಬೆಂಬಲಿಗರು ಕಾಂಗ್ರೆಸ್ ನಗರ ಕ್ಷೇತ್ರ ಅಭ್ಯರ್ಥಿ ನಾರಾ ಭರತ್ ರೆಡ್ಡಿ ಹಾಗೂ ಚಾನಾಳ್ ಶೇಖರ್ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷವನ್ನು ಸೇರ್ಪಡೆಗೊಂಡರು.



ಈ ವೇಳೆ ಸಮುದಾಯದ ಎಲ್ಲ ಮುಖಂಡರು ಚರ್ಚೆ ಮಾಡಿ ಈ ಸಲ ಚುನಾವಣೆಯಲ್ಲಿ ನಾರಾ ಭರತ್ ರೆಡ್ಡಿ ಅವರನ್ನು ಅತಿ ಹೆಚ್ಚು ಮತಗಳ ಅಂತರದಿಂದ ಗೆಲ್ಲಿಸುವಂತೆ ತೀರ್ಮಾನಿಸಲಾಯಿತು. ಬಿಜೆಪಿ ಮುಖಂಡ ಮಲ್ಲನಗೌಡರ ಬೆಂಬಲಿಗರಾದ ಅಂಗಡಿ ನಟರಾಜ್, ಕೋರಿ ಸುರೇಶ್, ಸಿದ್ದಾರ್ಥ ಕಾಲೋನಿ ಪ್ರಮುಖ ಮುಖಂಡ ಲಕ್ಷ್ಮೀ ರೆಡ್ಡಿ ಅವರು ಸೇರಿದಂತೆ ಅವರ ಎಲ್ಲ ಆಪ್ತರು ಇಂದು ಕಾಂಗ್ರೆಸ್ ಸೇರ್ಪಡೆಗೊಂಡರು.

21ನೇ ವಾರ್ಡ್‌ನಲ್ಲಿ ಪ್ರಮುಖ ಮುಖಂಡರ ಸಭೆ: 21ನೇ ವಾರ್ಡ್‌ನ ಬಸವೇಶ್ವರನಗರದ ವೀರಶೈವ ಗುರುಕುಲ ಆವರಣದಲ್ಲಿ ನಡೆದ ಸಭೆಯಲ್ಲಿ ನಾರಾ ಭರತ್ ರೆಡ್ಡಿ ಅವರನ್ನು ಭಾರೀ ಬಹುಮತದಿಂದ ಗೆಲ್ಲಿಸುವಂತೆ ಚರ್ಚೆ ನಡೆಸಿ, ತೀರ್ಮಾನಿಸಲಾಯಿತು. ವಿವಿಧ ಸಮುದಾಯಗಳ ಮುಖಂಡರು ಭಾಗವಹಿಸಿದ್ದರು. ಜಿವ್ವೇಶ್ವರಿ ರಾಮಕೃಷ್ಣ, ಲತಾ ಚಾನಾಳ್ ಶೇಖರ್, ಸುಮಂಗಳಮ್ಮ, ಜಾನೆಕುಂಟೆ ಕುಮ್ಮಿ, ಭಾಸ್ಕರ್ ರೆಡ್ಡಿ, ನರೇಂದ್ರಬಾಬು, ಹಿರೇಮಠ್, ಸೂರ್ಯಪ್ರಕಾಶ್, ಶಬರಿ ರವಿಚಂದ್ರ, ಗುರುಸಿದ್ಧ, ಯಾಳ್ಪಿ ದಿವಾಕರ್, ಚಿದಾನಂದಪ್ಪ, ಪ್ರಭಾಕರೆಡ್ಡಿ, ಮಂಜುನಾಥಸ್ವಾಮಿ ಇನ್ನೂ ಹಲವು ಪ್ರಮುಖ ಮುಖಂಡರು ಭಾಗಿಯಾಗಿದ್ದರು.

## ನನಗೆ ಅವಕಾಶ ಕಲಿಪಿಸಿ ಕೊಡಿ, ಬಳ್ಳಾರಿ ನಗರ ಅಭಿವೃದ್ಧಿಪಡಿಸುವೆ: ನಾರಾ ಭರತ್‌ರೆಡ್ಡಿ

ಬಳ್ಳಾರಿ: ಬಳ್ಳಾರಿ ಅಭಿವೃದ್ಧಿಗೆ ಸಂಬಂಧಿಸಿದಂತೆ ನನಗೆ ನೂರಾರು ಕನಸುಗಳಿವೆ. ನಾನು ಇದೇ ಮೊದಲ ಸಲ ವಿಧಾನಸಭಾ ಚುನಾವಣೆಗೆ ಸ್ಪರ್ಧಿಸಿರುವೆ. ನನಗೆ ಒಂದು ಅವಕಾಶ ಕೊಡಿ. ನಾನು ಬಳ್ಳಾರಿ ನಗರವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸುವೆ ಎಂದು ಬಳ್ಳಾರಿ ನಗರ ಕಾಂಗ್ರೆಸ್ ಅಭ್ಯರ್ಥಿ ನಾರಾ ಭರತ್ ರೆಡ್ಡಿ ಹೇಳಿದರು. ಬಳ್ಳಾರಿಯ ವಕೀಲರ ಸಂಘಕ್ಕೆ ಭೇಟಿ ನೀಡಿ ಮತಯಾಚನೆ ಮಾಡಿದರು.

ಈ ವೇಳೆ ಭರತ್ ರೆಡ್ಡಿಯವರ ತಂದೆ ಮಾಜಿ ಶಾಸಕ ನಾರಾ ಸೂರ್ಯನಾರಾಯಣ ರೆಡ್ಡಿ ಅವರು ಕೂಡ ಪುತ್ರನ ಪರ ಮತಯಾಚನೆ ಮಾಡಿದರು. ನಾನು ತಮ್ಮೆಲ್ಲರ




ಮುಂದೆ ಬೆಳೆದ ಹುಡುಗ, ನಿಮ್ಮೆಲ್ಲರ ಆಶೀರ್ವಾದದಿಂದ ಚುನಾವಣೆಗೆ ಸ್ಪರ್ಧೆ ಮಾಡಿರುವೆ.

ಕಾಂಗ್ರೆಸ್ ರಾಷ್ಟ್ರೀಯ ಪಕ್ಷ ಟಿಕೆಟ್ ನೀಡಿದೆ. ನನ್ನನ್ನು ಬೆಂಬಲಿಸಿ ಎಂದು ಮನವಿ ಮಾಡಿದರು.

ನಾನು ವಯಸ್ಸಿನಲ್ಲಿ ಚಿಕ್ಕವನು ಆದರೆ ಬಳ್ಳಾರಿ ನಗರವನ್ನು ಗ್ರೀನ್ ಅಂಡ್ ಕ್ಲೀನ್ ಸಿಟಿ ಮಾಡುವಂತಹ ಯೋಜನೆಗಳು ಕನಸುಗಳನ್ನು ಹೊಂದಿರುವೆ. ಬಳ್ಳಾರಿಯನ್ನು ಈ ಹಿಂದೆ ನೋಡಿದವರು ಬಳ್ಳಾರಿ ಹಿಂದೆ ಹೇಗಿತ್ತೋ ಇಂದೂ ಹಾಗೇ ಇದೆ ಎನ್ನುತ್ತಾರೆ. ಹೊರ ದೇಶಗಳಲ್ಲಿ ನಗರಗಳನ್ನು ನೋಡಿದಾಗ ಖೇದ ಎನಿಸುತ್ತದೆ ಎಂದರು.

2023 ಆದರೂ ಕೂಡ ಇನ್ನೂ ನಾವು ಚರಂಡಿ, ರಸ್ತೆ ಬಗ್ಗೆಯೇ ಮಾತಾಡುವಂತ ಸ್ಥಿತಿ ನಗರದಲ್ಲಿದೆ. ನನಗೆ ಒಂದು ಅವಕಾಶ ಕೊಡಿ ನಾನು ಬಳ್ಳಾರಿಯನ್ನು ಅಭಿವೃದ್ಧಿ ಪಡಿಸುವೆ.

ನಿಮಗೆಲ್ಲ ಚಿರಋಣಿಯಾಗಿರುವೆ ಎಂದರು. ವಕೀಲರ ಸಂಘದ ಅಧ್ಯಕ್ಷ ಯರೇಗೌಡ ಪ್ರಾಸ್ತಾವಿಕವಾಗಿ ಮಾತನಾಡಿ; ಉದ್ಯಮಿ, ಮಾಜಿ ಶಾಸಕ ನಾರಾ ಸೂರ್ಯನಾರಾಯಣ ರೆಡ್ಡಿಯವರು ಕೊಡುಗೈ ದಾನಿಗಳು. ವಕೀಲರ ಸಂಘದ ಶ್ರೇಯೋಭಿಲಾಷಿಗಳು. ಇಂದು ಅವರ ಪುತ್ರ ಬಳ್ಳಾರಿ ನಗರಕ್ಕೆ ಸ್ಪರ್ಧೆ ಮಾಡಿದ್ದಾರೆ. ನಾರಾ ಭರತ್ ರೆಡ್ಡಿ ಯುವಕರು, ಅಭಿವೃದ್ಧಿ ಚಿಂತಕರು ಅವರ ಮೇಲೆ ಸಂಘದ ಸದಸ್ಯರ ಹಾರೈಕೆ ಇರಲಿ ಎಂದರು.ಹಿರಿಯ ವಕೀಲರಾದ ಪಟೇಲ್ ಸಿದ್ಧಾರೆಡ್ಡಿ, ಉಡೇದ ಬಸವರಾಜ, ಜನಾರ್ಧನ, ಕೊಟ್ರೇಶ್, ಮಿಂಚೇರಿ ನರೇಂದ್ರಬಾಬು, ಬಂಡ್ರಾಳ ಮೃತ್ಯುಂಜಯ ಸ್ವಾಮಿ, ಸೇರಿದಂತೆ ಸಂಘದ ಪದಾಧಿಕಾರಿಗಳು, ಸದಸ್ಯರು ಹಾಗೂ ವಕೀಲರು ಹಾಜರಿದ್ದರು.ಈ ವೇಳೆ ಅಭ್ಯರ್ಥಿ ನಾರಾ ಭರತ್ ರೆಡ್ಡಿಯವರನ್ನು ಸನ್ಮಾನಿಸಲಾಯಿತು. ಸಭಾಂಗಣದಲ್ಲಿ ಹಾಜರಿದ್ದ ವಕೀಲರೆಲ್ಲರನ್ನೂ ಭರತ್ ಭೇಟಿ ಮಾಡಿ ಮತ ಯಾಚಿಸಿದರು. ಚಾನಾಳ್ ಶೇಖರ್, ಅಭಿ ಮೊದಲಾದವರು ಹಾಜರಿದ್ದರು.

## ಶಾಸಕ ಸೋಮಲಿಂಗಪ್ಪ ನೇತೃತ್ವದಲ್ಲಿ ಬಿ.ಜೆ.ಪಿ ಸೇರ್ಪಡೆಯಾದ ಬಿ.ಈರಣ್ಣ



ಬಳ್ಳಾರಿ:ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ವಿಧಾನಸಭಾ ಕ್ಷೇತ್ರದ ಮಾಜಿ ಪುರಸಭೆ ಅಧ್ಯಕ್ಷರಾದ ಬಿ.ಈರಣ್ಣನವರು ಶಾಸಕರಾದ ಸೋಮಲಿಂಗಪ್ಪ ಅವರ ನೇತ್ರತ್ವದಲ್ಲಿ ಮರಳಿ ಬಿ.ಜೆ.ಪಿ ಪಕ್ಷಕ್ಕೆ ಸೇರ್ಪಡೆಯಾಗಿದ್ದಾರೆ. ಅಧ್ಯಕ್ಷರಾದ ಪಂಪನಗೌಡ ,ಎಂ.ಆರ್ ಗೌಡ, ವೀರನಗೌಡ, ಸಿದ್ದರಾಮ ಗೌಡ, ಮಲ್ಲಿಕಾರ್ಜುನ ಸ್ವಾಮಿ,ಸುಳವಾಯಿ ಮಲ್ಲಿಕಾರ್ಜುನ, ಮೇಕೆಲಿವಿರೇಶ, ಹೊನ್ನಪ್ಪ, ಮಹದೇವಪ್ಪ , ಯಲ್ಲನಗೌಡ, ರುದ್ರಪ್ಪ ಮುಂತಾದವರು ಉಪಸ್ಥಿತರಿದ್ದರು.

# 9070 ಜನರಿಗೆ ತಮ್ಮ ಮನೆಯಿಂದಲೇ ಮತ ಚಲಾವಣೆಗೆ ಅವಕಾಶ: ಜಿಲ್ಲಾಧಿಕಾರಿ



ಬೆಳಗಾವಿ: ಜಿಲ್ಲೆಯಲ್ಲಿ ಒಟ್ಟು 9070 ವಿಕಲಚೇತನರು ಮತ್ತು 80 ವರ್ಷ ಮೇಲ್ಪಟ್ಟ ಜನರು ಮನೆಯಿಂದಲೇ ತಮ್ಮ ಮತ ಚಲಾಯಿಸಲು ಇಚ್ಛಿಸಿ ಈಗಾಗಲೇ ನಿಗದಿತ ನಮೂನೆಯನ್ನು ಭರ್ತಿ ಮಾಡಿ ಸಲ್ಲಿಸಿರುತ್ತಾರೆ.

ಆಯಾ ಮತಕ್ಷೇತ್ರಗಳಲ್ಲಿ ನಿಯೋಜಿತ ಅಧಿಕಾರಿಗಳ ತಂಡವು ಏಪ್ರಿಲ್ 29 ರಿಂದ ಮೇ 1 ರವರೆಗೆ ಸದರಿ ಮತದಾರರ ಮನೆ ಮನೆಗೆ ತೆರಳಿ ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಮತಸಂಗ್ರಹ ಮಾಡಲಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಗುರುವಾರ (ಏ.20) ನಡೆದ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಒಟ್ಟು ಹದಿನೆಂಟು ಮತಕ್ಷೇತ್ರಗಳಲ್ಲಿ ಒಟ್ಟಾರೆ 9070 ಜನರು ಮನೆಯಿಂದಲೇ ಮತದಾನ ಮಾಡಲು ಇಚ್ಛಿಸಿ ಈಗಾಗಲೇ ನಿಗದಿತ ನಮೂನೆಯಲ್ಲಿ ಒಪ್ಪಿಗೆ ಸಲ್ಲಿಸಿರುತ್ತಾರೆ. ಹೀಗೆ ಒಪ್ಪಿಗೆ ಸೂಚಿಸಿರುವ ಮತದಾರರು ಕಡ್ಡಾಯವಾಗಿ ಮನೆಯಿಂದಲೇ ಮತ ಚಲಾಯಿಸಬೇಕಾಗುತ್ತದೆ.

ಆದರೆ ಮೇ 10 ರಂದು ಮತಗಟ್ಟೆಗಳಿಗೆ ತೆರಳಿ ಮತ ಚಲಾವಣೆಗೆ ಅವಕಾಶ ಇರುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಇದರಲ್ಲಿ 80 ವರ್ಷ ಮೇಲ್ಪಟ್ಟಿರುವವರು ಒಟ್ಟು 7362 ಜನರು ಹಾಗೂ 1708 ವಿಕಲಚೇತನರು ಇದ್ದಾರೆ.

**80 ವರ್ಷ ಮೇಲ್ಪಟ್ಟಿರುವವರ ಮತಕ್ಷೇತ್ರವಾರು ವಿವರ:**

ಜಿಲ್ಲೆಯಲ್ಲಿ 80 ವರ್ಷ ಮೇಲ್ಪಟ್ಟಿರುವ ಒಟ್ಟು 7362 ಜನರು ಮನೆಯಿಂದಲೇ ಮತ ಚಲಾಯಿಸಲಿದ್ದು, ಮತಕ್ಷೇತ್ರವಾರು ವಿವರ ಈ ಕೆಳಕಂಡಂತಿ–ರುತ್ತದೆ.

ನಿಪ್ಪಾಣಿ(559), ಚಿಕ್ಕೋಡಿ–ಸದಲಗಾ(388), ಅಥಣಿ(299), ಕಾಗವಾಡ(365), ಕುಡಚಿ(211), ರಾಯಬಾಗ(314), ಹುಕ್ಕೇರಿ (151), ಅರಭಾವಿ(535), ಗೋಕಾಕ(351), ಯಮಕನಮರಡಿ (183), ಬೆಳಗಾವಿ ಉತ್ತರ(542), ಬೆಳಗಾವಿ ದಕ್ಷಿಣ (795), ಬೆಳಗಾವಿ ಗ್ರಾಮೀಣ (350), ಖಾನಾಪುರ(483), ಕಿತ್ತೂರು (347), ಬೈಲಹೊಂಗಲ (704), ಸವದತ್ತಿ–ಯಲ್ಲಮ್ಮ(407) ಹಾಗೂ ರಾಮದುರ್ಗ (378).

**ವಿಕಲಚೇತನ ಮತದಾರರ ವಿವರ:**

ಜಿಲ್ಲೆಯಲ್ಲಿ ಒಟ್ಟು 1708 ವಿಕಲಚೇತನರು ಮನೆಯಿಂದಲೇ ಮತ ಚಲಾಯಿಸಲಿದ್ದು, ಮತಕ್ಷೇತ್ರವಾರು ವಿವರ ಈ ಕೆಳಕಂಡಂತಿರುತ್ತದೆ.

ನಿಪ್ಪಾಣಿ(90), ಚಿಕ್ಕೋಡಿ–ಸದಲಗಾ(91), ಅಥಣಿ(52), ಕಾಗವಾಡ(54), ಕುಡಚಿ(50), ರಾಯಬಾಗ(85), ಹುಕ್ಕೇರಿ (92), ಅರಭಾವಿ(114), ಗೋಕಾಕ(105), ಯಮಕನಮರಡಿ (97), ಬೆಳಗಾವಿ ಉತ್ತರ(55), ಬೆಳಗಾವಿ ದಕ್ಷಿಣ (88), ಬೆಳಗಾವಿ ಗ್ರಾಮೀಣ (67), ಖಾನಾಪುರ(174), ಕಿತ್ತೂರು (143), ಬೈಲಹೊಂಗಲ (148), ಸವದತ್ತಿ–ಯಲ್ಲಮ್ಮ(77) ಹಾಗೂ ರಾಮದುರ್ಗ (126)

ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಅಂ–ದಾಜು 20 ತಂಡಗಳು ಮೂರು ದಿನಗಳ ಕಾಲ ಮನೆ ಮನೆಗೆ ತೆರಳಿ ಮತ ಸಂಗ್ರಹಿಸಲಿವೆ.

9070 ಜನರು ಮನೆಯಿಂದಲೇ ಮತದಾನ ಮಾಡಲು ಇಚ್ಛಿಸಿ ನಿಗದಿತ 12 ಡಿ ನಮೂನೆಯನ್ನು ಭರ್ತಿ ಮಾಡಿ ನೀಡಿರುತ್ತಾರೆ.

ನಿಗದಿತ ನಮೂನೆಯನ್ನು ಭರ್ತಿ ಮಾಡಿದವರ ಮನೆಗೆ ತೆರಳಿ ಮತದಾನ ಪ್ರಕ್ರಿಯೆ ನಡೆಸಲಾಗುತ್ತದೆ.

ಈ ಸಂದರ್ಭದಲ್ಲಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಕೂಡ ಉಪಸ್ಥಿತರಿರಲು ಅವಕಾಶವಿರುತ್ತದೆ. ಈ ರೀತಿ ಮತಸಂಗ್ರಹ ಸಂದರ್ಭದಲ್ಲಿ ಉಪಸ್ಥಿತ–ರಿರುವ ಏಜೆಂಟರುಗಳ ಕು–ರಿತು ಎಲ್ಲ ರಾಜಕೀಯ ಪಕ್ಷಗಳು ಮುಂಚಿತವಾಗಿ ಹಾಗೂ ಲಿಖಿತವಾಗಿ ಮಾಹಿತಿಯನ್ನು ನೀಡಬೇಕು. ಯಾವುದೇ ಕಾರಣಕ್ಕೂ ಮತದಾರ–ರಿಗೆ ಆಮಿಷ ಒಡ್ಡಬಾರದು ಮತ್ತು ಮತದಾನ ಗೌಪ್ಯತೆ ಕಾಪಾಡಬೇಕಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಇದೇ ಸಂದರ್ಭದಲ್ಲಿ ಕೆಲವು ಸಾಮಗ್ರಿಗಳ ದರಪಟ್ಟಿ ಕುರಿತು ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಜತೆ ಚರ್ಚಿಸಿ ದರಪಟ್ಟಿಯನ್ನು ಅಂತಿಮಗೊಳಿಸಲಾಯಿತು.

ಅಪರ ಜಿಲ್ಲಾಧಿಕಾರಿ ಕೆ.ಟಿ.ಶಾಂತಲಾ, ಜಿಲ್ಲಾ ವೆಚ್ಚ ತಂಡದ ನೋಡಲ್ ಅಧಿಕಾರಿ ಪರಶುರಾಮ ದುಡಗುಂಟಿ, ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ವಿದ್ಯುತ್ ತಂತಿ ತಗುಲಿ ಇಬ್ಬರು ಬಾಲಕರು ದುರ್ಮರಣ



ತುಮಕೂರು: ಮನೆ ಮೇಲೆ ಹಾದು ಹೋಗಿದ್ದ ವಿದ್ಯುತ್ ತಂತಿ ತಗುಲಿ ಇಬ್ಬರು ಬಾಲಕರು ಸಾವನ್ನಪ್ಪಿರುವ ಘಟನೆ ತಾಲೂಕಿನ ಬೆಳಗುಂಬ ಗ್ರಾಮದಲ್ಲಿ ನಡೆದಿದೆ.

ನಿತೇಶ್(14), ಪ್ರಜ್ವಲ್(13) ಮೃತ ದುರ್ದೈವಿಗಳು. ಮನೆ ಮೇಲೆ ಆಟವಾಡುತ್ತಿದ್ದಾಗ ತಂತಿ ತಗುಲಿ ಈ ದುರಂತ ಸಂಭವಿಸಿದ್ದು, ಕೆಇಬಿ ವಿರುದ್ಧ ಗ್ರಾಮಸ್ಥರು ಹಾಗೂ ಪೋಷಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕ್ಯಾತ್ಸಂದ್ರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಬಾಲಾಜಿ ಶುಗರ್ಸ್ ಕಾರ್ಖಾನೆ ಮೇಲೆ ಐಟಿ ಅಧಿಕಾರಿಗಳ ದಿಢೀರ್ ದಾಳಿ

ವಿಜಯಪುರ: ಯರಗಲ್ ಕೆ.ಬಿ.ಗ್ರಾಮದಲ್ಲಿರುವ ಬಾಲಾಜಿ ಶುಗರ್ಸ್ ಕಾರ್ಖಾನೆ ಮೇಲೆ ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ವಿಜಯಪುರ ಜಿಲ್ಲೆಯ ಯರಗಲ್ ಬಿ.ಕೆ. ಗ್ರಾಮದಲ್ಲಿರುವ ಬಾಲಾಜಿ ಶುಗರ್ಸ್ ಮೇಲೆ ಬೆಳಿಗ್ಗೆಯೇ ಐಟಿ ಅಧಿಕಾರಿಗಳು ದಾಳಿ ನಡೆಸಿದ್ದು, ದಾಖಲೆಗಳ ಪರಿಶೀಲನೆ ನಡೆಸಿದ್ದಾರೆ.

ಕಳೆದ ತಿಂಗಳು ಇದೇ ಕಾರ್ಖಾನೆ ಮೇಲೆ ಚುನಾವಣಾಧಿಕಾರಿಗಳು ದಾಳಿ ನಡೆಸಿದ್ದರು. ಈ ವೇಳೆ ಮಾಜಿ ಸಚಿವ ಎಸ್.ಆರ್.ಪಾಟೀಲ್ ಭಾವಚಿತ್ರವಿರುವ ವಾಲ್ ಕ್ಲಾಕ್, ಟೀ ಶರ್ಟ್ ಸೇರಿದಂತೆ 2.50 ಕೋಟಿ ಮೌಲ್ಯದ ವಸ್ತುಗಳು ಪತ್ತೆಯಾಗಿದ್ದವು. ಐಟಿ ಅಧಿಕಾರಿಗಳಿಗೆ ಮಾಹಿತಿ ನೀಡಲಾಗಿತ್ತು. ಈ ಹಿನ್ನೆಲೆಯಲ್ಲಿ ಈಗ ಐಟಿ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ನಡೆಸಿದ್ದಾರೆ.

ಬಾಲಾಜಿ ಶುಗರ್ಸ್ ಕಾರ್ಖಾನೆ ನಿರ್ದೇಶಕ ಹೆಚ್ ಎಲ್ ಪಾಟೀಲ್ ಮನೆ ಮೇಲೂ ದಾಳಿ ನಡೆಸಿದ್ದಾರೆ.

## ರೈಲು ನಿಲ್ದಾಣದ ಟಿವಿಯಲ್ಲಿ ನೀಲಿ ಚಿತ್ರ ಪ್ರಸಾರ: ಮುಜುಗರಕ್ಕೀಡಾದ ಸಿಬ್ಬಂದಿ

ರೈಲು ನಿಲ್ದಾಣದ ಟಿವಿಯಲ್ಲಿ ನೀಲಿ ಚಿತ್ರ ಪ್ರಸಾರವಾದ ಬಳಿಕ ಇದೀಗ ಬಿಹಾರ ರಾಜ್ಯದ ಭಾಗಲಪುರ ರೈಲು ನಿಲ್ದಾಣದ ಟಿವಿಯಲ್ಲೂ ಇದೇ ರೀತಿ ಘಟನೆ ನಡೆದಿದೆ.

ಕೆಲ ಹೊತ್ತು ಅಶ್ಲೀಲ ಮೆಸೇಜ್ ಒಂದು ಕಾಣಿಸಿಕೊಂಡಿದೆ. ಬಳಿಕ ಕೆಲ ನಗ್ನ ಚಿತ್ರಗಳು ಟಿವಿ ಪರದೆಯಲ್ಲಿ ಕಾಣಿಸಿಕೊಂಡಿವೆ.

ಇದರಿಂದಾಗಿ ಪ್ರಯಾಣಿಕರು, ರೈಲ್ವೆ ಸಿಬ್ಬಂದಿಗಳು ಮುಜುಗರಕ್ಕೀಡಾಗಿದ್ದಾರೆ.

ಇದಕ್ಕಿದ್ದಂತೆ ಟಿವಿಯಲ್ಲಿ ಅಸಭ್ಯ ಹಾಗೂ ನೀಲಿ ಚಿತ್ರದ ಮೆಸೇಜ್ ಹಾಗೂ ಚಿತ್ರಗಳು ಕಾಣಿಸಿಕೊಂಡಿದೆ. ಪರದೆಯಲ್ಲಿ ನಗ್ನಚಿತ್ರ ಹಾಗೂ ಸಂದೇಶಗಳು ಕಾಣಿಸಿಕೊಂಡಂತೆ ಪ್ರಯಾಣಿಕರು ಮುಜುಗರಕ್ಕೀಡಾಗಿದ್ದಾರೆ. ಹಲವರು ಈ ವಿಡಿಯೋವನ್ನು ಚಿತ್ರೀಕರಿಸಿ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದಾರೆ.

ತಕ್ಷಣವೇ ಅಲರ್ಟ್ ಆದ ರೈಲು ನಿಲ್ದಾಣದ ಸಿಬ್ಬಂದಿಗಳು ಟಿವಿ ಆಫ್ ಮಾಡಿದ್ದಾರೆ. ಸರಿಸುಮಾರು 10 ನಿಮಿಷಗಳ ಕಾಲ ಅಸಭ್ಯ ಮೆಸೇಜ್ ಟಿವಿ ಪರದೆಯಲ್ಲಿ ಕಾಣಿಸಿಕೊಂಡಿದೆ.

ಈ ಕುರಿತು ಮಾಹಿತಿ ಪಡೆದ ರೈಲ್ವೆ ಪೊಲೀಸರು ತಕ್ಷಣವೇ ಸ್ಥಳಕ್ಕೆ ಆಗಮಿಸಿದ್ದಾರೆ. ಟಿವಿ ನಿರ್ವಹಣೆ ಏಜೆನ್ಸಿ ಸಿಬ್ಬಂದಿಗಳನ್ನು ವಿಚಾರಣೆ ನಡೆಸಿದ್ದಾರೆ ಎಂದು ವರದಿಯಾಗಿದೆ.

## ಮಾನ್ಯತೆಯ ಸಮಸ್ಯೆಯನ್ನು ಮೇ.31 ರ ವೇಳೆಗೆ ಬಗೆಹರಿಸಿಕೊಳ್ಳಿ ಇಲ್ಲವೇ ಬಂದ್ ಮಾಡಿ; ಅನಧಿಕೃತ ಶಾಲೆಗಳಿಗೆ ಸೂಚನೆ

ಬೆಂಗಳೂರು: ಮಾನ್ಯತೆಯ ಸಮಸ್ಯೆಯನ್ನು ಬಗೆಹರಿಸಿಕೊಳ್ಳುವುದಕ್ಕೆ ಅನಧಿಕೃತ ಖಾಸಗಿ ಶಾಲೆಗಳಿಗೆ ಶಾಲಾ ಶಿಕ್ಷಣ ಇಲಾಖೆ ಮೇ.31 ರ ವರೆಗೆ ಗಡುವು ನೀಡಿದೆ. ಒಂದು ವೇಳೆ ನಿಗದಿತ ಗಡುವಿನಲ್ಲಿ ಸಮಸ್ಯೆ ಬಗೆಹರಿಯದೇ ಹೋದಲ್ಲಿ ಅಂತಹ ಶಾಲೆಗಳನ್ನು ಮುಚ್ಚುವಂತೆ ಶಾಲಾ ಶಿಕ್ಷಣ ಇಲಾಖೆ ತಿಳಿಸಿದೆ.

ರಾಜ್ಯದಲ್ಲಿ ಅನಧಿಕೃತ ಖಾಸಗಿ ಶಾಲೆಗಳು ನಡೆಯುತ್ತಿರುವುದರ ಬಗ್ಗೆ ಪೋಷಕರು ದೂರು ನೀಡುತ್ತಿರುವ ಪ್ರಕರಣಗಳು ಹೆಚ್ಚುತ್ತಿದೆ ಹಾಗೂ ಶಾಲೆಗಳು ಹಲವು ಅನಧಿಕೃತ ತರಗತಿಗಳನ್ನು ನಡೆಸುತ್ತಿರುವ ಪ್ರಕರಣಗಳೂ ವರದಿಯಾಗಿರುವುದರಿಂದ, ಮಾನ್ಯತೆ ಸಮಸ್ಯೆಯನ್ನು ಮೇ.31 ರ ವೇಳೆಗೆ ಬಗೆಹ–ರಿಸಿಕೊಳ್ಳದೇ ಇದ್ದಲ್ಲಿ ಅಂತಹ ಶಾಲೆಗಳನ್ನು ಮುಚ್ಚಲಾಗುತ್ತದೆ ಎಂದು ಸರ್ಕಾರಿ ಆದೇಶದಲ್ಲಿ ಹೇಳಿದೆ.

ಆದೇಶದ ಪ್ರಕಾರ ಇಲಾಖೆ 45 ದಿನಗಳ ಕಾಲ ಸಮಯ ನೀಡಿದ್ದು, ಅನಧಿಕೃತ ಶಾಲೆಗಳು ಸಮಸ್ಯೆಗಳನ್ನು ಬಗೆಹರಿಸಿಕೊಳ್ಳುವುದನ್ನು ಖಾತ್ರಿಪಡಿಸಿಕೊಳ್ಳುವ ಹೊಣೆಯನ್ನು ಉಪ ನಿರ್ದೇಶಕರುಗಳಿಗೆ ವಹಿಸಲಾಗಿದೆ.

ನಿರ್ದಿಷ್ಟವಾಗಿ ಹೇಳುವುದಾದರೆ, ನೋಂದಣಿ ಇಲ್ಲದೆ ನಡೆಯುತ್ತಿರುವ ಶಾಲೆಗಳು, ಅನಧಿಕೃತವಾಗಿ ಮುಂದುವರಿದ ತರಗತಿಗಳನ್ನು ನಡೆಸುತ್ತಿರುವ ಶಾಲೆಗಳು (9 ಮತ್ತು 10 ನೇ ತರಗತಿಗಳು), ರಾಜ್ಯದಲ್ಲಿ ಮಾನ್ಯತೆ ಪಡೆದು ಕೇಂದ್ರೀಯ ಪಠ್ಯಕ್ರಮವನ್ನು ಅನುಸರಿಸುವ ಶಾಲೆಗಳು, ಅನಧಿಕೃತ ಮಾಧ್ಯಮಗಳಲ್ಲಿ ಬೋಧನೆ ಮಾಡುವ ಶಾಲೆಗಳು, ಶಾಲೆಗಳಿಗೆ ಈ ಸರ್ಕಾರಿ ಆದೇಶದಲ್ಲಿ ಅನ್ವಯವಾಗಲಿದೆ.

ಅನಧಿಕೃತ ಇಲಾಖೆಗಳನ್ನು ನಡೆಸುವುದು, ಇಲಾಖೆಗೆ ಪೂರ್ವ ಸೂಚನೆ ಇಲ್ಲದೆ ಶಾಲೆಗಳ ಮಾಲೀಕತ್ವವನ್ನು ಹಸ್ತಾಂತರಿಸುವುದು, ಮಾನ್ಯತೆಯನ್ನು ನವೀಕರಿಸದೆ ರಾಜ್ಯ ಪಠ್ಯಕ್ರಮವನ್ನು ಬೋಧಿಸುವುದು ಮತ್ತು ಪಠ್ಯಕ್ರಮದ ಹೊರಗೆ ಪಠ್ಯಪುಸ್ತಕಗಳ ಸಂಗ್ರಹಣೆ ಮತ್ತು ಅಳವಡಿಕೆ ಇವೆಲ್ಲವನ್ನೂ ನಿಯಮ ಉಲ್ಲಂಘನೆ ಎಂದು ಪರಿಗಣಿಸಲಾಗುತ್ತದೆ ಎಂದು ಸರ್ಕಾರಿ ಆದೇಶ ಹೇಳಿದೆ.

## ಸೇನಾ ಟ್ರಕ್ ಬೆಂಕಿಗಾಹುತಿ: 4 ಯೋಧರು ಹುತಾತ್ಮ



ಜಮ್ಮು: ಸೇನಾ ಟ್ರಕ್ ಬೆಂಕಿಗಾಹುತಿಯಾಗಿ ನಾಲ್ವರು ಯೋಧರು ಹುತಾತ್ಮರಾಗಿರುವ ಘಟನೆ ಜಮ್ಮು ಕಾಶ್ಮೀರದ ಪೂಂಚ್ ವಲಯದಲ್ಲಿ ನಡೆದಿದೆ.

ಸ್ಥಳಕ್ಕೆ ಸೇನಾ ಸಿಬ್ಬಂದಿ ಧಾವಿಸಿದ್ದು ಟ್ರಕ್‌ನಲ್ಲಿದ್ದವರ ರಕ್ಷಣೆಗೆ ಹರಸಾಹಸ ಪಡುತ್ತಿದ್ದಾರೆ. ಇನ್ನು ಕೆಲವು ಸೈನಿಕರು ಸಾವನಪ್ಪಿರುವ ಶಂಕೆ ವ್ಯಕ್ತವಾಗಿದೆ.

ಜಮ್ಮು ಹೆದ್ದಾರಿಯ ಪೂಂಚ್ ವಲಯದಲ್ಲಿ ಸೇನಾ ಟ್ರಕ್ ಬೆಂಕಿಗಾಹುತಿಯಾದ ಭೀಕರ ದೃಶ್ಯ ಸೋಷಿಯಲ್ ಮೀಡಿಯಾಗಳಲ್ಲಿ ಹ–ರಿದಾಡುತ್ತಿದೆ.

ಸೇನಾ ಟ್ರಕ್ ಈ ಅವಘಡಕ್ಕೆ ಕಾರಣ ತಿಳಿದು ಬಂದಿಲ್ಲ. ಭಾರತೀಯ ಸೇನೆ ಈ ಬಗ್ಗೆ ಅಧಿಕೃತ ಮಾಹಿತಿ ನೀಡಬೇಕಿದೆ.

## ಯಾವುದೇ ಆಮಿಷಕ್ಕೆ ಒಳಗಾಗದೆ ಮತ ಚಲಾಯಿಸಿ: ಲಕ್ಷ್ಮೀನಾರಾಯಣ ಪಿ.



ಬೆಳಗಾವಿ: ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಕಾಮಗಾರಿ ಸ್ಥಳದಲ್ಲಿ ಬುಧವಾರ ಏಪ್ರೀಲ್ 19 ರಂದು ಹುಕ್ಕೇರಿಯಲ್ಲಿ ಕೂಲಿ ಕಾರ್ಮಿಕರಿಗೆ ಮತಜಾಗೃತಿ ಕಾರ್ಯಕ್ರಮ ಏರ್ಪಡಿಸಲಾಗಿ–ತ್ತು.

ತಾಲ್ಲೂಕು ಪಂಚಾಯತ ಸಹಾಯಕ ನಿರ್ದೇಶಕರು (ಗ್ರಾ.ಉ) ಲಕ್ಷ್ಮೀನಾರಾಯಣ ಪಿ ಅವರು ಕಾರ್ಮಿಕರೊಂದಿಗೆ ಮಾತನಾಡಿ, ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಿ, ಮತ ಚಲಾಯಿಸುವ ಮೂಲಕ ನಿಮ್ಮ ಹಕ್ಕನ್ನು ಚಲಾಯಿಸಿ.

ನಿಮಗೆ ಬೇಕಾದ ನಾಯಕರನ್ನು ನೀವೇ ಆಯ್ಕೆ ಮಾಡಿಕೊಳ್ಳಬಹುದು ಎಂದು ತಿಳಿಸಿದರು. ಮೇ 10 ರಂದು ಎಲ್ಲರೂ ಮತ ಕೇಂದ್ರಗಳಿಗೆ ತೆರಳಿ ಮತದಾನ ಮಾಡಲು ಕರೆ ಕೊಟ್ಟರು.

ಮತದಾರರು ಯಾವುದೇ ಆಮಿಷಕ್ಕೆ ಒಳಗಾಗದೇ ನಿಮ್ಮ ಮತವನ್ನು ಚಲಾಯಿಸಬೇಕು.

ಮತವನ್ನು ಮಾರಿಕೊಂಡರೆ ನಿಮ್ಮನ್ನು ನೀವು ಮಾರಿಕೊಂಡಂತೆ. ಮತದಾನದಿಂದ ಯಾರು ವಂಚಿತರಾಗದೆ ಕಡ್ಡಾಯವಾಗಿ ಮತ ಚಲಾಯಿಸಿ ಎಂದು ಕಾರ್ಮಿಕರಿಗೆ ತಾಲೂಕಾ ಯೋಜನಾಧಿಕಾರಿಗಳು ತಿಳಿಸಿದರು.

ಸಹಾಯಕ ನಿರ್ದೇಶಕರು (ಗ್ರಾ.ಉ) ಲಕ್ಷ್ಮೀನಾರಾಯಣ ಪಿ, ತಾಲೂಕಾ ಯೋಜನಾಧಿಕಾರಿ ಪ್ರಶಾಂತ ಮುನ್ನೋಳಿ, ತಾಲೂಕಾ ಐಇಸಿ ಸಂಯೋಜಕರಾದ ಮಹಾಂತೇಶ ಬಾದವನಮಠ, ಬಿ. ಎಫ್.ಟಿ, ಗಳಾದ ಸಂಜು ಕಾಡಗಿ, ಮಹಾನಿಂಗ ನೊಗಿನಿಹಾಳ, ಸಿದ್ದಪ್ಪ ಬೆಳ್ಳಂಬಿ, ರಾಜು ನೊಗಿನಿಹಾಳ, ಪರುಶರಾಮ ಮಗದುಮ್ಮ ಸೇರಿದಂತೆ ಗ್ರಾಮ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

## ಮತದಾನದಿಂದ ಸಮಾಜದಲ್ಲಿ ಸಮಾನತೆ ಸಾಧ್ಯ: ಹೂಗಾರ




ಬೆಳಗಾವಿ: ಮತದಾನ ಮಾಡುವದ–ರಿಂದ ಸಮಾಜದಲ್ಲಿ ಸಮಾನತೆ ಕಾಣಲು ಸಾಧ್ಯ. ಆದ್ದರಿಂದ ಎಲ್ಲರೂ ತಪ್ಪದೇ ಮತದಾನ ಮಾಡಬೇಕೆಂದು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿ.ಐ ಹೂಗಾರ ಅವರು ಹೇಳಿದರು.

ತಾಲ್ಲೂಕಿನ ಕಿಣಯೇ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬರುವ ನಾವಗೇ ಗ್ರಾಮದಲ್ಲಿ ಜಿಲ್ಲಾ ಪಂಚಾಯತ, ಗ್ರಾಮ ಪಂಚಾಯತ ಹಾಗೂ ಕೆ.ಎಲ್.ಇ ವಿಶ್ವ ವಿಧ್ಯಾಲಯ ಇವರ ಸಂಯೋಗದಲ್ಲಿ ಗುರುವಾರ ಏಪ್ರಿಲ್ 20 ರಂದು ರಾಮಲಿಂಗ ಮಂದಿರದಲ್ಲಿ ಆಯೋಜಿಸಿದ್ದ ಮತಜಾಗೃತಿ ಕಾಲು ನಡಿಗೆ ಜಾಥಾ ಕಾರ್ಯಕ್ರಮದ ಹಾಗೂ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮತದಾನದ ವಿಷಯದಲ್ಲಿ ಯಾರೂ ಮೇಲಲ್ಲ, ಯಾರೂ ಕೀಳಲ್ಲ. ಎಲ್ಲರಿಗೂ ಒಂದೇ ಮತ ಚಲಾಯಿಸುವ ಹಕ್ಕು ಇದೆ. ಹಾಗಾಗಿ ಮತದಾನ ಮಾಡುವುದರಿಂದ ಯಾರು ವಂಚಿತರಾಗಬಾರದು.

ತಮ್ಮ ಮತ ಚಲಾಯಿಸಿ ಉತ್ತಮ ನಾಯಕರನ್ನು ಆಯ್ಕೆ ಮಾಡಬೇಕೆಂದು ಅವರು ತಿಳಿಸಿದರು.

ರಾಷ್ಟ್ರೀಯ ಸೇವಾ ಯೋಜನಾಧಿಕಾರಿ ಡಾ. ನಾಗರಾಜ ಪಾಟೀಲ್ ಅವರು ಮಾತನಾಡಿ, ಸಾರ್ವಜನಿಕರು ಮತದಾನ ವಿಷಯದಲ್ಲಿ ಹಿಂಜರಿಯದೇ ಮುಕ್ತವಾಗಿ ಮತದಾನ ಮಾಡಬೇಕು ಎಂದು ಹೇಳಿದರು.

ನಾವಗೇ ಗ್ರಾಮ ವಿವಿಧ ಬೀದಿಗಳಲ್ಲಿ ಸಂಚರಿಸಿ ಮತಜಾಗೃತಿ ಮೂಡಿಸಲಾಯಿತು.

## ಯುವ ಮತದಾರರು ಮತದಾನ ಜಾತ್ರೆಯಲ್ಲಿ ಪಾಲ್ಗೊಳ್ಳಿ

### ತಾಲೂಕಾ ಸ್ವೀಪ್ ಅಧ್ಯಕ್ಷ ಸುಭಾಷ್ ಸಂಪಗಾಂವಿ




ಬೆಳಗಾವಿ: ತಾಲೂಕಾ ಸ್ವೀಪ್ ಸಮೀತಿ ಬೈಲಹೊಂಗಲ ವತಿಯಿಂದ ವಿಧಾನ ಸಭಾ ಚುನಾವಣೆ 2023 ರ ಪ್ರಯುಕ್ತವಾಗಿ 16–ಬೈಲಹೊಂಗಲ ವಿಧಾನ ಸಭಾ ಮತಕ್ಷೇತ್ರ ದಲ್ಲಿ ಯುವ ಮತದಾರರ ಮತಗಟ್ಟೆ 133 ವಕ್ಕುಂದ ಕ್ಕೆ ಸ್ವೀಪ್ ಸಮೀತಿ ಅಧ್ಯಕ್ಷರು ಎಸ್ ಎಸ್ ಸಂಪಗಾಂವಿ ಭೇಟಿ ನೀಡಿ ಸದರಿ ಮತಗಟ್ಟೆಯನ್ನು ವೀಕ್ಷಣೆ ಮಾಡಿದರು.

ಇಲ್ಲಿ ಒಟ್ಟು ಯುವ ಮತದಾರರು 525 ಅದರಲ್ಲಿ ಪುರುಷ ಮತದಾರರು 279 ಹಾಗೂ ಮಹಿಳೆಯರು 246 ಜನ ಇದ್ದಾರೆ.

ಮತದಾನ ಜಾತ್ರೆಯಲ್ಲಿ ಎಲ್ಲಾ ಯುವಕರು ಪಾಲ್ಗೊಳ್ಳಿ ಸೇಲ್ಫಿ ಸ್ಟೀಕ್ ಗೆ ಮತದಾನ ಮಾಡಿರುವ ಕೈಯನ್ನು ತೋರಿಸುವ ಮೂಲಕ ಯುವಕರಿಗೆ ಕರೆ ನೀಡಿದರು.

ಗ್ರಾಪಂ ಸೇಕ್ಟರ್ ಆಪೀಸರ್ ವಿಶ್ವನಾಥ ಎಚ್, ಪಿಡಿಓ ವಿಜಯಲಕ್ಷ್ಮಿ ಅನಿಗೋಳ ತಾಪಂ ಐಇಸಿ ಸಂಯೋಜಕ ಎಸ್ ವ್ಹಿ ಹಿರೇಮಠ ಗ್ರಾಪಂ ಸಿಬ್ಬಂದಿಗಳು ಹಾಜರಿದ್ದರು.

# 25ರಂದು ಮ್ಯಾನ್‌ಕೈಂಡ್ ಫಾರ್ಮಾ ಐಪಿಓ ಬಿಡುಗಡೆ

ಹುಬ್ಬಳ್ಳಿ : ಮ್ಯಾನ್‌ಕೈಂಡ್ ಫಾರ್ಮಾ ಲಿಮಿಟೆಡ್ ತನ್ನ 4,00,58,844 ಈಕ್ವಿಟಿ ಷೇರುಗಳ ಆರಂಭಿಕ ಸಾರ್ವಜನಿಕ ಕೊಡುಗೆಯನ್ನು (ಐಪಿಒ) 2023ರ ಏಪ್ರಿಲ್ 25, ಮಂಗಳವಾರತೆರೆಯಲು ಉದ್ದೇಶಿಸಿದೆ. ಬಿಡ್/ಕೊಡುಗೆ ಮುಕ್ತಾಯದ ದಿನಾಂಕ 2023ರ ಏಪ್ರಿಲ್ 27, ಗುರುವಾರ ನಿಗದಿಪಡಿಸಲಾಗಿದೆ. ಸಾಂಸ್ಥಿಕ ಹೂಡಿಕೆದಾರರ ಬಿಡ್ಡಿಂಗ್ ದಿನಾಂಕವು, ಬಿಡ್/ಕೊಡುಗೆ ತೆರೆಯುವ ದಿನಾಂಕದ ಮೊದಲಿನ ಒಂದು ಕೆಲಸದ ದಿನವಾಗಿರುವ 2023ರ ಏಪ್ರಿಲ್ 24ಕ್ಕೆ ನಿಗದಿಪಡಿಸಲಾಗಿದೆ.

4,00,58,844 ಸಾಮಾನ್ಯ ಷೇರುಗಳ ಕೊಡುಗೆಯು, ರಮೇಶ್ ಜುನೇಜಾ ಅವ–ರಿಂದ 37,05,443, ರಾಜೀವ್ ಜುನೇಜಾ ಅವರಿಂದ 35,05,149 ಷೇರುಗಳು, ಶೀತಲ್ ಅರೋರಾ ಅವರಿಂದ 28,04,119 ಷೇರುಗಳು (ಒಟ್ಟಾರೆಯಾಗಿ, 'ಮಾರಾಟ ಮಾಡುವ ಪ್ರವರ್ತಕರು ಷೇರುದಾರರು'), ಕೈರ್ನ್‌ಹಿಲ್ ಸಿಐಪಿಇಎಫ್ ಲಿಮಿಟೆಡ್‌ನಿಂದ 1,74,05,559 ಷೇರುಗಳು, ಕೈರ್ನ್‌ಹಿಲ್ ಸಿಜಿಪಿಇ ಲಿಮಿಟೆಡ್‌ನಿಂದ 26,23,863 ಷೇರುಗಳು, ಬೀಗೆ ಲಿಮಿಟೆಡ್‌ನಿಂದ 99,64,711 ಷೇರುಗಳು ಮತ್ತು ಲಿಂಕ್ ಇನ್ವೆಸ್ಟ್‌ಮೆಂಟ್ ಟ್ರಸ್ಟ್‌ನಿಂದ 50,000 ಷೇರುಗಳು (ಒಟ್ಟಾರೆಯಾಗಿ, 'ಹೂಡಿಕೆದಾರರು ಮಾರಾಟ ಮಾಡುವ ಷೇರುದಾರರು' ಮತ್ತು 'ಪ್ರವರ್ತಕರು ಮಾರಾಟ ಮಾಡುವ ಷೇರುದಾರರು' ಒಳಗೊಂಡ "ಮಾರಾಟ ಮಾಡುವ ಷೇರುದಾರರು') ಷೇರುಗಳ ಮಾರಾಟದ ಪ್ರಸ್ತಾಪ ಒಳಗೊಂಡಿದೆ

ಕೊಡುಗೆ ಅನ್ವಯ ಪ್ರತಿ ಸಾಮಾನ್ಯ ಷೇ–ರಿನ ಬೆಲೆಪಟ್ಟಿಯನ್ನು ರೂ 1,026 ರಿಂದ ರೂ 1,080 ಕ್ಕೆ ನಿಗದಿಪಡಿಸಲಾಗಿದೆ. ಕನಿಷ್ಠ 13 ಷೇರುಗಳಿಗೆ ಮತ್ತು ನಂತರ 13 ಷೇರುಗಳ ಗುಣಕಗಳಲ್ಲಿ ಬಿಡ್‌ಗಳನ್ನು ಮಾಡಬಹುದು.ಭಾರತೀಯ ಷೇರು ನಿಯಂತ್ರಣ ಮಂಡಳಿಯ (ಸೆಬಿ) ಐಸಿಡಿಆರ್‌ನಿಯಂತ್ರಣ ನಿಯಮ 6(1) ಕ್ಕೆ ಅನುಗುಣವಾಗಿ ಬುಕ್ ಬಿಲ್ಡಿಂಗ್ ಪ್ರಕ್ರಿಯೆ ಮೂಲಕ ಈ ಕೊಡುಗೆ ನೀಡಲಾಗುತ್ತಿದೆ, ಇದರಲ್ಲಿ ಅರ್ಹ ಸಾಂಸ್ಥಿಕ ಬಿಡ್‌ದಾರ–ರಿಗೆ (ಕ್ಯುಐಬಿ) ಹಂಚಿಕೆಗೆ ಶೇ 50ಕ್ಕಿಂತ ಹೆಚ್ಚು ಕೊಡುಗೆ ಲಭ್ಯವಿರುವುದಿಲ್ಲ. ಒಂದು ಮೂರಾಂಶದಷ್ಟು ಭಾಗವನ್ನು ದೇಶಿ ಮ್ಯೂಚುವಲ್ ಫಂಡ್‌ಗಳಿಗೆ ಕಾಯ್ದಿರಿಸಲಾಗುತ್ತದೆ, ಅರ್ಹ ಸಾಂಸ್ಥಿಕ ಬಿಡ್‌ದಾರರ (ಕ್ಯುಐಬಿ) ನಿವ್ವಳ ಶೇ 5ರಷ್ಟು ಭಾಗವು ಮ್ಯೂಚುವಲ್ ಫಂಡ್‌ಗಳಿಗೆ ಲಭ್ಯ ಇರಲಿದೆ. ಸಾಂಸ್ಥಿಕಯೇತರ ಹೂಡಿಕೆದಾರ–ರಿಗೆ (ಎನ್‌ಐಐ) ಶೇ 15 ಮತ್ತು ರಿಟೇಲ್ ಹೂಡಿಕೆದಾರರಿಗೆ ಶೇ 35ರಷ್ಟು ಕೊಡುಗೆ ನಿಗದಿಪಡಿಸಲಾಗಿದೆ. ಈ ಷೇರು ಮುಂಬೈ ಷೇರುಪೇಟೆ (ಬಿಎಸ್‌ಇ) ಮತ್ತು ರಾಷ್ಟ್ರೀಯ ಷೇರುಪೇಟೆ (ಎನ್‌ಎಸ್‌ಇ) ಯಲ್ಲಿ ವಹಿವಾಟು ನಡೆಸಲಿದೆ.

## ಕಳೆದ ಬಾರಿಗಿಂತ ದೊಡ್ಡ ಅಂತರದಿಂದ ಗೆಲುವು ನಿಶ್ಚಿತ: ಲಕ್ಷ್ಮೀ ಹೆಬ್ಬಾಳಕರ್





ಬೆಳಗಾವಿ: ಕಳೆದ 5 ವರ್ಷದಲ್ಲಿ ನಾನು ಮಾಡಿರುವ ಅಭಿವೃದ್ಧಿ ಕೆಲಸಗಳ ಕಾರಣದಿಂದಾಗಿ 2018ರ ವಿಧಾನ ಸಭೆ ಚುನಾವಣೆಗಿಂತ ದೊಡ್ಡ ಪ್ರಮಾಣದ ಅಂತರದಲ್ಲಿ ಈ ಬಾರಿ ಗೆಲುವಾಗಲಿದೆ ಎಂದು ಬೆಳಗಾವಿ ಗ್ರಾಮೀಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ, ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಬೆಳಗಾವಿ ಗ್ರಾಮೀಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಅವರು ಗುರುವಾರ ಸಂಜೆ ಮುತಗಾದಲ್ಲಿ ಭಾರೀ ಜನಸ್ತೋಮದ ಮಧ್ಯೆ ಪ್ರಚಾರ ನಡೆಸಿದರು. ಈ ವೇಳೆ ಮಾತನಾಡಿ, ನಾನು ಅಭಿವೃದ್ಧಿಯನ್ನು ಮುಂದಿಟ್ಟು ನಿಮ್ಮಲ್ಲಿ ಮತ ಕೇಳುತ್ತೇನೆ. ನಿಮ್ಮ ಮನೆಯ ಮಗಳಾಗಿ, ಅಕ್ಕನಾಗಿ, ತಂಗಿಯಾಗಿ, ತಾಯಿಯಾಗಿ ನಿಮ್ಮ ಆಶೀರ್ವಾದ ಕೇಳುತ್ತಿದ್ದೇನೆ. ವಾಸ್ತವದ ಆಧಾರದ ಮೇಲೆ ನೀವು ನನ್ನನ್ನು ಬೆಂಬಲಿಸಿ. ಯಾವುದೇ ಬಣ್ಣದ ಮಾತುಗಳಿಗೆ ಮರುಳಾಗಬೇಡಿ.

ಈ ಬಾರಿ ಕಳೆದ ಬಾರಿಗಿಂತ ಹೆಚ್ಚಿನ ಅಂತರದಿಂದ ಗೆಲುವು ಸಾಧಿಸುವಂತೆ ಮಾಡಿ ಎಂದು ಕೋರಿದರು.

ನಾನು ಯಾವುದೇ ಊರಿಗೆ ಹೋದರೂ ನೀವು ತೋ–ರಿಸುತ್ತಿರುವ ಪ್ರೀತಿಗೆ ಮಿತಿಯೇ ಇಲ್ಲ. ನಿಮ್ಮಂತಹ ಜನರನ್ನು ಪಡೆದ ನಾನೇ ಧನ್ಯ. ಮುಂದಿನ 5 ವರ್ಷ ಅಷ್ಟೇ ಅಲ್ಲ, ಕೊನೆಯ ಉಸಿರಿರುವವರೆಗೂ ನಿಮ್ಮ ಸೇವೆ ಮಾಡುವ ಶಕ್ತಿಯನ್ನು ದೇವರು ಕೊಡಲೆಂದು ಪ್ರಾರ್ಥಿಸುತ್ತೇನೆ. ಪ್ರತಿಯೊಬ್ಬರೂ ನಿಮ್ಮ ಸಂಬಂಧಿಕರು, ಪರಿಚಯಸ್ತರ ಬಳಿ ನನ್ನ ಪರವಾಗಿ ಮತ ಯಾಚನೆ ಮಾಡಿ ಎಂದು ಹೆಬ್ಬಾಳಕರ್ ವಿನಂತಿಸಿದರು.

## ಬಿಪಿಎಪಿ ಪಕ್ಷದಿಂದ ಲಾಹೋರಿ ನಾಮಪತ್ರ ಸಲ್ಲಿಕೆ




ತಾಳಿಕೋಟೆ : ವಿಧಾನ ಸಭಾ ಚುನಾವಣೆಯ ಮುದ್ದೇಬಿಹಾಳ ಮತಕ್ಷೇತ್ರದ ಭಾರತ ಪ್ರಜಾ ಐಕ್ಯತಾ ಪಕ್ಷದಿಂದ ತಾಳಿಕೋಟೆಯ ಜಾಕೀರ ಹುಸೇನ ಹುಸೇನಸಾಬ ಲಾಹೋರಿ ಅವರು ಗುರುವಾರರಂದು ನಾಮಪತ್ರ ಸಲ್ಲಿಸಿದರು.

ಮುದ್ದೇಬಿಹಾಳ ತಹಶಿಲ್ದಾರ ಕಾರ್ಯಾಲಯದಲ್ಲಿ ಚುನಾವಣಾಧಿಕಾರಿ ಚಂದ್ರಕಾಂತ ಪವಾರ ಅವರಿಗೆ ನಾಮಪತ್ರ ಸಲ್ಲಿಸಿದ್ದಾರೆ. ಚುನಾವಣಾಧಿಕಾರಿಯ ಬಳಿ ನಾಮಪತ್ರ ಸಲ್ಲಿಕೆ ಸಂದರ್ಭ ನಿಯಮದಂತೆ ಕೇವಲ ಐವರಿಗೆ ಮಾತ್ರ ಅವಕಾಶ ಇದ್ದುದ್ದರಿಂದ ಮುಖಂಡರಾದ ಎಚ್.ಆರ್.ಭಾಗವಾನ, ದೀಲಿಪಸಿಂಗ್ ಹಜೇರಿ ಅವರು ಜಾಕೀರಹುಸೇನ ಲಾಹೋರಿ ಅವರ ಜೊತೆಯಾಗಿ ನಾಮ ಪತ್ರ ಸಲ್ಲಿಸಿದರು.

ಈ ಸಮಯದಲ್ಲಿ ಖಾಜಾಅಮೀನ ಚಾಂದಕೋಟೆ, ಫಯಾಜ್ ಅವಟಿ, ಫಯಾಜಅಹ್ಮದ ಬಶಟ್ಯಾಳ, ಇಮ್ರಾನ್ ಅರಬೋಳ, ಇಸ್ಮಾಯಿಲ್ ನಾಡಗೌಡ, ರಾಜಅಹ್ಮದ ಭಾಗವಾನ, ಸೋಹೇಲ್ ಇನಾಮದಾರ, ದಾದಾ ಹುಂಡೇಕಾರ, ಅಕ್ಬರ ಮನಗೂಳಿ, ಮೊದಲಾದವರು ಇದ್ದರು.



# ವಿಧಾನಸಭಾ ಚುನಾವಣೆಯಲ್ಲಿ ದಲಿತ ಸಂಘರ್ಷ ಸಮಿತಿಗಳ ಐಕ್ಯ ಹೋರಾಟ ಚಾಲನಾ ಸಮಿತಿಯಿಂದ ಕಾಂಗ್ರೆಸ್ ಗೆ ಬೆಂಬಲ: ಡಿ.ಕೆ. ಶಿವಕುಮಾರ್

ಬೆಂಗಳೂರು: ದೇಶದಲ್ಲಿ ಸಂವಿಧಾನ, ಪ್ರಜಾಪ್ರಭುತ್ವ ರಕ್ಷಣೆ, ದಲಿತ ಸಮುದಾಯಗಳ ಹಕ್ಕು ರಕ್ಷಣೆ ಹಾಗೂ ದಲಿತರ ಮೇಲಿನ ದೌರ್ಜನ್ಯಗಳನ್ನು ಕೊನೆಗಾಣಿಸುವ ನಿಟ್ಟಿನಲ್ಲಿ 2023ರ ಕರ್ನಾಟಕ ರಾಜ್ಯ ವಿಧಾನಸಭೆ ಚುನಾವಣೆಯಲ್ಲಿ 224 ಕ್ಷೇತ್ರಗಳಲ್ಲಿ ದಲಿತ ಸಂಘರ್ಷ ಸಮಿತಿಗಳ ಐಕ್ಯ ಹೋರಾಟ ಚಾಲನಾ ಸಮಿತಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ಘೋಷಿಸಿವೆ' ಎಂದು ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್, ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ಕಾರ್ಯಾಧ್ಯಕ್ಷರಾದ ಸಲೀಂ ಅಹ್ಮದ್ ಅವರ ಸಮ್ಮುಖದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ಸಂಘಟನೆಯ ನಾಯಕರುಗಳು ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ಘೋಷಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಡಿ.ಕೆ. ಶಿವಕುಮಾರ್ ಅವರು ಹೇಳಿದ್ದಿಷ್ಟು;

ಈ ಸಂಘಟನೆಯಲ್ಲಿ 20 ಕ್ಕೂ ಹೆಚ್ಚು ವಿವಿಧ ದಲಿತ ಸಂಘಟನೆಗಳಿದ್ದು, ಇವರು ಎಲ್ಲ ಸಂಘಟನೆಗಳ ಜತೆ ಸೇರಿ ಇಡೀ ರಾಜ್ಯದುದ್ದಗಲದಲ್ಲಿ ಚರ್ಚೆ ಮಾಡಿ ಮುಂಬರುವ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡುವ ತೀರ್ಮಾನ ಮಾಡಿದ್ದಾರೆ. ಕಳೆದ 20 ವರ್ಷಗಳಿಂದ ಯಾವುದೇ ಅಧಿಕಾರಕ್ಕೆ ಆಸೆ ಮಾಡದೇ, ಕೇವಲ ತತ್ವ ಸಿದ್ಧಾಂತಗಳಿಗಾಗಿ ಹೋರಾಟ ಮಾಡಿಕೊಂಡು ಬಂದಿದ್ದಾರೆ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಕೊಟ್ಟಿರುವ ಸಂವಿಧಾನವನ್ನು ಉಳಿಸಬೇಕು. ಈ ವಿಚಾರವಾಗಿ ಯಾವ ಪಕ್ಷ ಕಾರ್ಯ ನಿರ್ವಹಿಸಲಿದೆ ಆ ಪಕ್ಷದ ಜತೆ ನಿಲ್ಲಲ್ಲು ತೀರ್ಮಾನ ಮಾಡಿದ್ದಾರೆ. 6ರಂದು ಇವರು ದೊಡ್ಡ ಸಮಾವೇಶ ಮಾಡಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡಲು ತೀರ್ಮಾನಿಸಿದ್ದಾರೆ.ಈ ಸಂಘಟನೆಯಲ್ಲಿ ಕೇವಲ ಪರಿಶಿಷ್ಟ ಜಾತಿ ಹಾಗೂ ಪಂಗಡದವರು ಮಾತ್ರವಲ್ಲ, ಎಲ್ಲಾ ವರ್ಗದ ಜನರು ಹೋರಾಟ ಮಾಡಿಕೊಂಡು ಬಂದಿದ್ದಾರೆ. ಈ ಸಂದರ್ಭದಲ್ಲಿ ಪಕ್ಷದ ಎಲ್ಲ ನಾಯಕರ ಪರವಾಗಿ ಪಕ್ಷಕ್ಕೆ ಸ್ವಾಗತಿಸುತ್ತೇನೆ. ಎಲ್ಲರೂ ರಾಜ್ಯಾದ್ಯಂತ ನಿಮ್ಮ ಪ್ರೀತಿ ವಿಶ್ವಾಸಕ್ಕೆ ಧನ್ಯವಾದಗಳು.

**ಇಂದೂಧರ ಹೊನ್ನಾಪುರ:**

ನಾವು ಆರಂಭದಿಂದಲೂ ಜನಪರ ಹಾಗೂ ಜಾತ್ಯಾತೀತ ಬದುಕು ಕಟ್ಟಿಕೊಡಲು ಹೋರಾಟ ಮಾಡಿಕೊಂಡು ಬಂದಿದ್ದೇವೆ. ಕಳೆದ 9 ವರ್ಷಗಳಿಂದ ದೇಶದಲ್ಲಾಗುತ್ತಿರುವ ಬೆಳವಣಿಗೆ ಗಮನಿಸಿ ಪ್ರಜಾಪ್ರಭುತ್ವ ಹಾಗೂ ಸಂವಿಧಾನ ರಕ್ಷಣೆಗೆ ಕಾಂಗ್ರೆಸ್ ಅಧಿಕಾರಕ್ಕೆ ಬರಬೇಕು ಎಂದು ತೀರ್ಮಾನಿಸಿ ನಾವು ಕೆಲವು ಷರತ್ತುಗಳೊಂದಿಗೆ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡುತ್ತಿದ್ದೇವೆ.

ಕೇಂದ್ರ ಹಾಗೂ ರಾಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದ ನಂತರ ದಲಿತರ ಮೇಲೆ ದೌರ್ಜನ್ಯಗಳು ಹೆಚ್ಚಾಗಿವೆ. ದಲಿತರ ಹಕ್ಕುಗಳನ್ನು ಕಸಿಯಲಾಗುತ್ತಿದೆ. ಮಕ್ಕಳಿಗೆ ನೀಡಲಾಗುತ್ತಿದ್ದ ವಿದ್ಯಾರ್ಥಿವೇತನ ನಿಲ್ಲಿಸಿದ್ದಾರೆ. ಸಂವಿಧಾನ ಬದಲಿಸುತ್ತೇವೆ ಎಂಬ ಬಹಿರಂಗ ಹೇಳಿಕೆ ನೀಡಿದ್ದಾರೆ. ಹೀಗಾಗಿ ದೇಶದಲ್ಲಿ ಕೆಳ ಸಮುದಾಯದವರು, ಮಹಿಳೆಯರು, ಕಾರ್ಮಿಕರು ಬದುಕಲು, ಸಂವಿಧಾನದ ಬಹುತ್ವವನ್ನು ಪುನರ್ಸ್ಥಾಪಿಸಬೇಕು. ಇದಕ್ಕಾಗಿ 2023 ಚುನಾವಣೆಯಲ್ಲಿ ನಾವು 224 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡುತ್ತಿದ್ದೇವೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗ ಸಂವಿಧಾನ ಮೌಲ್ಯಗಳನ್ನು ಎತ್ತಿ ಹಿಡಿಯಬೇಕು. ಮತಾಂತರ ನಿಷೇಧ, ಗೋ ಹತ್ಯೆ ನಿಷೇಧ, ರೈತವಿರೋಧಿ ಹಾಗೂ ಜನವಿರೋಧಿ ಕಾಯ್ದೆಗಳನ್ನು ರದ್ದು ಮಾಡಬೇಕು.

**ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕರಾದ ಸಿದ್ದರಾಮಯ್ಯ:**

ದಲಿತ ಸಂಘರ್ಷ ಸಮಿತಿ ಐಕ್ಯ ಹೋರಾಟ ಸಮಿತಿ ನಾಯಕರು ಇಂದು ಕೆಲವು ಷರತ್ತುಗಳ ಮೇಲೆ ಮುಂದಿನ ರಾಜ್ಯ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿಸಲು ಮುಂದಾಗಿದ್ದಾರೆ. ಅವರು ಉತ್ತಮ ತೀರ್ಮಾನ ಮಾಡಿದ್ದಾರೆ. ದೇಶದಲ್ಲಿ ಸಂವಿಧಾನ ವಿರೋಧಿ ಶಕ್ತಿಗಳನ್ನು ಹಿಮ್ಮೆಟ್ಟಿಸಬೇಕು. ಬಿಜೆಪಿಗೆ ಎಂದಿಗೂ ಸಂವಿಧಾನದ ಮೇಲೆ ಗೌರವವಿಲ್ಲ.

ಅಂಬೇಡ್ಕರ್ ಅವರು ಸಂವಿಧಾನ ಜಾರಿಗೆ ತಂದ ನಂತರವೇ ಅದಕ್ಕೆ ವಿರೋಧ ಮಾಡಿದ್ದು, ಈಗಲೂ ಮಾಡುತ್ತಿದ್ದಾರೆ. ಸಂವಿಧಾನ ರಕ್ಷಣೆಯಾಗದೇ, ಶೋಷಿತ ವರ್ಗಗಳ ರಕ್ಷಣೆ ಆಗುವುದಿಲ್ಲ. ಬಿಜೆಪಿ ಸಂವಿಧಾನ ಹಾಗೂ ಪ್ರಜಾಪ್ರಭುತ್ವ ವಿರೋಧಿ ಪಕ್ಷ. ಇಂತಹ ಸಂದರ್ಭದಲ್ಲಿ ದಲಿತ ಸಂಘಟನೆಗಳು ಒಕ್ಕೂಟ ಮಾಡಿಕೊಂಡು ಹೋರಾಟ ಮಾಡಿಕೊಂಡು ಬಂದಿದ್ದಾರೆ. ಇಂದು ಅವರು ತಮ್ಮ ಷರತ್ತುಗಳನ್ನು ನಮ್ಮ ಮುಂದೆ ಇಟ್ಟಿದ್ದು, ಕಾಂಗ್ರೆಸ್ ಪಕ್ಷ ಸಂವಿಧಾನದ ತತ್ವ, ಸಿದ್ಧಾಂತ, ನಿಯಮಾವಳಿಗೆ ಕಾಂಗ್ರೆಸ್ ಬದ್ಧವಾಗಿದ್ದು, ಯಾವುದೇ ಕಾರಣಕ್ಕೂ ಸಂವಿಧಾನ ವಿಚಾರದಲ್ಲಿ ರಾಜಿ ಇಲ್ಲ. ಸಂವಿಧಾನ ರಕ್ಷಣೆ, ಅದರ ಧ್ಯೇಯೋದ್ದೇಶ ಈಡೇರಿಸುವುದು ಕಾಂಗ್ರೆಸ್ ಸಿದ್ಧಾಂತ. ಈ ಸಂಘಟನೆಗಳು ಕಾಂಗ್ರೆಸ್ ಪಕ್ಷ ಬೆಂಬಲಿಸುವ ತೀರ್ಮಾನವನ್ನು ನಾನು ಸ್ವಾಗತಿಸುತ್ತೇನೆ.

## ನೆರವು ವಿತರಣೆ ವೇಳೆ ಕಾಲ್ತುಳಿತ: 85 ಸಾವು, 322 ಮಂದಿಗೆ ಗಾಯ



ಯುದ್ಧ ಪೀಡಿತ ಯೆಮನ್‌ನಲ್ಲಿ ಗುರುವಾರ ನೆರವು ವಿತರಣೆ ವೇಳೆ ಸಂಭವಿಸಿದ ಕಾಲ್ತುಳಿತದಲ್ಲಿ 85ಕ್ಕೂ ಅಧಿಕ ಜನ ಸಾವನ್ನಪ್ಪಿದ್ದು, 322 ಮಂದಿ ಗಾಯಗೊಂಡ ದುರ್ಘಟನೆ ಸಂಭವಿಸಿದೆ.

ಯೆಮನ್ ರಾಜಧಾನಿಯ ಹೂತಿ ನಿಯಂತ್ರಿತ ಜಿಲ್ಲೆ ಬಾಬ್ ಅಲ್–ಯೆಮನ್‌ನಲ್ಲಿ ಈ ದುರ್ಘಟನೆ ನಡೆದಿದೆ. ರಂಜಾನ್ ಪವಿತ್ರ ಮಾಸದಲ್ಲೇ ಸಂಭವಿಸಿರುವ ಈ ದುರಂತ ಅರೇಬಿಯಾದ ಬಡರಾಷ್ಟ್ರ ಯೆಮನ್‌ಅನ್ನು ಶೋಕಕ್ಕೆ ದೂಡಿದೆ.

ಮೃತರಲ್ಲಿ ಮಹಿಳೆಯರು ಮತ್ತು ಮಕ್ಕಳು ಸೇರಿದ್ದಾರೆ ಎಂದು ಭದ್ರತಾ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಕೆಲ ವ್ಯಾಪಾರಿಗಳು ಸರ್ಕಾರದ ಆಂತರಿಕ ಸಚಿವಾಲಯದ ಗಮನಕ್ಕೆ ತರದೇ ಬುಧವಾರ ಸಂಜೆ ಜನರಿಗೆ ನೆರವಿನ ರೂಪದಲ್ಲಿ ಹಣ ವಿತರಿಸಿದ್ದಾರೆ. ಆಗ ಈ ಘಟನೆ ನಡೆದಿದೆ ಎಂದು ಹೂತಿ ನಿಯಂತ್ರಿತ ಆಂತರಿಕ ಸಚಿವಾಲಯದ ವಕ್ತಾರ ಅಬ್ದುಲ್ ಖಾಲಿದ್ ಅಲ್–ಅಜ್ರಿ ತಿಳಿಸಿದ್ದಾರೆ ಎಂದು ವರದಿಯಾಗಿದೆ.

ಮೃತರು ಮತ್ತು ಗಾಯಾಳುಗಳನ್ನು ಹತ್ತಿರದ ಆಸ್ಪತ್ರೆಗಳಿಗೆ ಸ್ಥಳಾಂತರಿಸಲಾಗಿದೆ. ನೆರವು ವಿತರಣಾ ಕಾರ್ಯಕ್ರಮ ಆಯೋಜಿಸಿದ್ದವರನ್ನು ವಶಕ್ಕೆ ತೆಗೆದುಕೊಳ್ಳಲಾಗಿದೆ ಎಂದು ಹೂತಿ ಆಂತರಿಕ ಸಚಿವಾಲಯ ತಿಳಿಸಿದೆ ಎಂದು ವರದಿಯಿಂದ ತಿಳಿದುಬಂದಿದೆ.

## ಸಿಡಿಲು ಬಡಿದು ಮಹಿಳೆ ಸಾವು



ಬೆಳಗಾವಿ: ಸಿಡಿಲು ಬಡಿದು ಮಹಿಳೆಯೊಬ್ಬರು ಮೃತಪಟ್ಟಿರುವ ಘಟನೆ ಖಾನಾಪುರ ತಾಲೂಕಿನ ಬೀಡಿ ಗ್ರಾಮದಲ್ಲಿ ನಡೆದಿದೆ.

ಬೀಡಿ ಗ್ರಾಮದ ಲಕ್ಷ್ಮೀ ಮಾದರ(35) ಮೃತಪಟ್ಟ ಮಹಿಳೆ. ಇವರು ಇಟ್ಟಿಗೆ ಬಟ್ಟಿಯಲ್ಲಿ ಕೆಲಸ ಮಾಡುವ ವೇಳೆ ಜೋರಾದ ಮಳೆ ಬಂದಿದೆ. ಇಟ್ಟಿಗೆಗಳ ಮೇಲೆ ಪ್ಲಾಸ್ಟಿಕ್ ಮುಚ್ಚಲು ಹೋದಾಗ ಮಹಿಳೆಗೆ ಸಿಡಿಲು ಬಡಿದು ಸ್ಥಳದಲ್ಲೇ ಲಕ್ಷ್ಮೀ ಮೃತಪಟ್ಟಿದ್ದಾಳೆ. ಈ ಕುರಿತು ಖಾನಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

## ಕಡೂರು ಜೆಡಿಎಸ್ ಅಭ್ಯರ್ಥಿ ವೈಎಸ್‌ವಿ ದತ್ತ ವಿರುದ್ಧ 41 ಚೆಕ್ ಬೌನ್ಸ್ ಪ್ರಕರಣ

ಚಿಕ್ಕಮಗಳೂರು: ಕಡೂರು ಕ್ಷೇತ್ರದ ಜೆಡಿ–ಎಸ್ ಅಭ್ಯರ್ಥಿ ವೈಎಸ್‌ವಿ ದತ್ತ ಅವರ ವಿರುದ್ಧ ಚೆಕ್‌ಬೌನ್ಸ್‌ನ 41 ಪ್ರಕರಣಗಳು ರಾಜ್ಯ ಮತ್ತು ಹೊರರಾಜ್ಯಗಳಲ್ಲಿ ದಾಖಲಾಗಿವೆ.

ಜೆಡಿಎಸ್ ಅಭ್ಯರ್ಥಿ ವೈಎಸ್ವಿ ದತ್ತಾ ವಿರುದ್ಧ 41 ಚೆಕ್ ಬೌನ್ಸ್ ಪ್ರಕರಣಗಳು ದಾಖಲಾಗಿವೆ ಎಂಬ ಮಾಹಿತಿಯನ್ನು ಚುನಾವಣಾ ಅಧಿಕಾರಿಗಳಿಗೆ ಸಲ್ಲಿಸಿರುವ ಪ್ರಮಾಣ ಪತ್ರದಲ್ಲಿ ನೀಡಿದ್ದಾರೆ. 2014 ರಿಂದ 2023ರ ವರೆಗೆ ರಾಜ್ಯ ಹೊರರಾಜ್ಯಗಳಲ್ಲಿ 41 ಚೆಕ್ಬೌನ್ಸ್ ಪ್ರಕರಣಗಳು ದಾಖಲಾಗಿವೆ.

ಚೆಕ್ ನಗದು ಆಗದಿರುವ ಕಾರಣ ಈ ಎಲ್ಲ ಪ್ರಕರಣಗಳು ನೆಗೋಷಿಯೇಬಲ್ ಇನ್‌ಸ್ಟ್ರುಮೆಂಟ್ಸ್ (ಎನ್‌ಐ) ಕಾಯ್ದೆ 1881 ರ ಕಲಂ 138ರ ಅಡಿಯಲ್ಲಿ ದಾಖಲಾಗಿವೆ. 2014ರಿಂದ 2020 ಅವಧಿಯಲ್ಲಿ ಈ



ಪ್ರಕರಣಗಳು ದಾಖಲಾಗಿದ್ದು, ವಿಚಾರಣೆ ಹಂತದಲ್ಲಿವೆ.

ವೈಎಸ್ವಿ ದತ್ತಾ ಅವರ ಬಳಿ 2022–23 ರಲ್ಲಿ 8 ಲಕ್ಷದ 15 ಸಾವಿರ ಆದಾಯ ಹೊಂದಿದ್ದಾರೆ. 17.89 ಲಕ್ಷ ಮೌಲ್ಯದ ಚರಾಸ್ತಿ, 2.94 ಕೋಟಿ ಮೌಲ್ಯದ ಸ್ಥಿರಾಸ್ತಿ ಹೊಂದಿದ್ದಾರೆ. ಒಟ್ಟು 93.19 ಲಕ್ಷ ಸಾಲ ಪಡೆದುಕೊಂಡಿದ್ದಾರೆ.

ಬೆಂಗಳೂರಿನ ಎಸಿಎಂಎಂ ನ್ಯಾಯಾಲಯದಲ್ಲಿ 6 ಪ್ರಕರಣ, ಬೆಂಗಳೂರಿನ ಎಸಿಎಂಎಂ 12, 15,18, 19, 23, 26, 36ನೇ ನ್ಯಾಯಾಲಯಗಳಲ್ಲಿ ತಲಾ ಒಂದು, ಬೆಂಗಳೂರಿನ ಎಸಿಎಂಎಂ 22ನೇ ನ್ಯಾಯಾಲಯದಲ್ಲಿ ಮೂರು, 42ನೇ ನ್ಯಾಯಾಲಯದಲ್ಲಿ 6 ಪ್ರಕರಣ, ಬೆಂಗಳೂರಿನ ಎಸ್‌ಸಿಸಿಎಚ್ 6ನೇ ಮತ್ತು 8ನೇ ನ್ಯಾಯಾಲಯಗಳಲ್ಲಿ ತಲಾ ಒಂದು, ಮಂಗಳೂರಿನ ಜೆಎಫ್‌ಸಿ ನ್ಯಾಯಾಲಯದಲ್ಲಿ 5 ಮತ್ತು 4ನೇ ಜೆಎಂಎಫ್‌ಸಿಯಲ್ಲಿ 3 ಪ್ರಕರಣ, ಅಥಣಿ ಜೆಎಂಎಫ್‌ಸಿ ನ್ಯಾಯಾಲಯದಲ್ಲಿ ಎರಡು, ಹಾಸನ ನ್ಯಾಯಾಲಯದಲ್ಲಿ ಎರಡು, ಹಾಸನ ಜಿಲ್ಲೆ ಬೇಲೂರು, ಹುಬ್ಬಳ್ಳಿ, ಗದಗ ನ್ಯಾಯಾಲಯಗಳಲ್ಲಿ ತಲಾ ಒಂದು. ಅನಂತಪುರ ನ್ಯಾಯಾಲಯದಲ್ಲಿ ಒಂದು, ಗುಂತಕಲ್ ನ್ಯಾಯಾಲಯದಲ್ಲಿ ಮೂರು ಪ್ರಕರಣ ದಾಖಲಾಗಿವೆ.

## ಶಾರ್ಟ್ ಸರ್ಕ್ಯೂಟ್ ನಿಂದ ಹೊತ್ತಿ ಉರಿದ ಪಟಾಕಿ ಅಂಗಡಿ



ಮೈಸೂರು: ನಗರದ ಹೆಬ್ಬಾಳು ಕೈಗಾರಿಕಾ ಪ್ರದೇಶದಲ್ಲಿನ ಜೂಪಿಟರ್ ಪಟಾಕಿ ಅಂಗಡಿಯಲ್ಲಿ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದ ಭಾರೀ ಸ್ಫೋಟ ಉಂಟಾಗಿದೆ. ಆಕಾಶದೆತ್ತರಕ್ಕೆ ಬೆಂಕಿಯ ಕೆನ್ನಾಲಿಗೆ ಚಿಮ್ಮಿದ್ದು, ಲಕ್ಷಾಂತರ ಮೌಲ್ಯದ ಪಟಾಕಿಗಳು ಬೆಂಕಿಗಾಹುತಿಯಾಗಿದೆ.

ಪಟಾಕಿಗಳು ಸ್ಫೋಟಗೊಂಡ ಪರಿಣಾಮ ಸುಮಾರು 2 ಗಂಟೆಗಳ ಕಾಲ ಅಂಗಡಿ ಹೊತ್ತಿ ಉರಿದಿದ್ದು, ಅಂಗಡಿ ಅಕ್ಕಪಕ್ಕದ ಮನೆಗಳಿಗೂ ಬೆಂಕಿ ತಗುಲಿದೆ. ಅಲ್ಲದೇ ಅಂಗಡಿಯ ಹೊರಾಂಗಣದಲ್ಲಿ ನಿಲ್ಲಿಸಿದ್ದ 2 ಕಾರುಗಳು ಸುಟ್ಟು ಭಸ್ಮವಾಗಿವೆ.

ಸ್ಥಳಕ್ಕಾಗಮಿಸಿದ ಅಗ್ನಿಶಾಮಕ ಬೆಂಕಿ ನಂದಿಸಲು ಸಿಬ್ಬಂದಿ ಹರಸಾಹಸಪಟ್ಟಿದ್ದಾರೆ, ಬಳಿಕ ಹೆಬ್ಬಾಳು ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲಿಸಿದ್ದಾರೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ ಎಂದು ತಿಳಿದುಬಂದಿದೆ.

## ಲಂಚ ಪಡೆಯುತ್ತಿದ್ದ ವೇಳೆ ಲೋಕಾಯುಕ್ತ ಬಲೆಗೆ ಬಿದ್ದ ಬೆಸ್ಕಾಂ ಸಹಾಯಕ ಇಂಜಿನಿಯರ್



ಬೆಂಗಳೂರು: ಬೆಸ್ಕಾಂ ಸಹಾಯಕ ಇಂಜಿನಿಯರ್ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ. ಕೊತ್ತನೂರು ಬೆಸ್ಕಾಂ ಸಹಾಯಕ ಇಂಜಿನಿಯರ್ ಆದ ರಾಕೇಶ್ ಲೋಕಾ ಬಲೆಗೆ ಬಿದ್ದ ಅಧಿಕಾರಿ ಎಂದು ಗುರುತಿಸಲಾಗಿದೆ. 30 ಸಾವಿರ ಲಂಚ ಪಡೆಯುವಾಗ ರೆಡ್ ಹ್ಯಾಂಡ್ ಆಗಿ ಲೋಕಾಯುಕ್ತ ಪೊಲೀಸರು, ದಾಳಿ ನಡೆಸಿ, ಬಂಧಿಸಿದ್ದಾರೆ.

ಸದ್ಯ ರಾಜೇಶ್ ವಿಚಾರಣೆ ನಡೆಸುತ್ತಿರುವ ಲೋಕಾಯುಕ್ತ ಪೊಲೀಸರು, ಕಚೇರಿಯಲ್ಲಿ 2 ಲಕ್ಷ ಹೆಚ್ಚುವರಿ ಹಣ ಕೂಡ ಪತ್ತೆ ಮಾಡಿದ್ದಾರೆ. ಇನ್ನೂ ಹೆಚ್ಚುವರಿ ಹಣದ ಬಗ್ಗೆ ಹೆಚ್ಚಿನ ವಿಚಾರಣೆ ಮಾಡುತ್ತಿರುವ ಲೋಕಾಯುಕ್ತ ಪೊಲೀಸರು, ಮುಂದಿನ ತನಿಖೆ ಕೈಗೊಂಡಿದ್ದಾರೆ.

ಇನ್ನೂ ಬೆಂಗಳೂರಿನ ಕೊತ್ತನೂರು ಬೆಸ್ಕಾಂ ಸಹಾಯಕ ಇಂಜಿನಿಯರ್ ರಾಕೇಶ್ ವಿರುದ್ಧ ಭ್ರಷ್ಟಾಚಾರ ತಡೆ ಕಾಯ್ದೆ ಅಡಿ ಎಫ್‌ಐಆರ್ ಕೂಡ ದಾಖಲು ಮಾಡಲಾಗಿದೆ. ರಾಜೇಶ್ ಕಚೇರಿಯಲ್ಲಿ 2 ಲಕ್ಷ ರೂ. ಹೆಚ್ಚುವರಿ ನಗದು ಕೂಡ ಪತ್ತೆ ಆಗಿದೆ. ಸದ್ಯ ರಾಜೇಶ್ನನ್ನು ವಶಕ್ಕೆ ಪಡೆದು ಲೋಕಾಯುಕ್ತ ಅಧಿಕಾರಿಗಳು ವಿಚಾರಣೆ ನಡೆಸುತ್ತಿದ್ದಾರೆ.

## ಲೋಕಾಯುಕ್ತ ಬಲೆಗೆ ಅಗ್ನಿಶಾಮಕ ಅಧಿಕಾರಿ




ದಾವಣಗೆರೆ: ಶಾಲೆಯ ಮಾನ್ಯತೆ ನವೀಕರಣಕ್ಕೆ ಅಗತ್ಯವಿದ್ದ ನಿರಾಕ್ಷೇಪಣಾ ಪತ್ರವನ್ನು ನೀಡಲು ಲಂಚದ ರೂಪದಲ್ಲಿ ಲ್ಯಾಪ್‌ಟಾಪ್ ಪಡೆಯುತ್ತಿದ್ದಾಗ ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಬಸವಪ್ರಭು ಶರ್ಮ ಹಾಗೂ ಫೈರ್‌ಮನ್ ಎಸ್.ಕೆ. ರಾಜೇಶ್ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

ಹರಿಹರದ ದುರುಗೋಜಿ ಗೋಪಾಲರಾವ್ ಶಿಕ್ಷಣ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಡಿ.ಜಿ. ರಘುನಾಥ್ ಅವರು ತಮ್ಮ ವಿದ್ಯಾದಾಯಿನಿ ಶಾಲೆಯ ಮಾನ್ಯತೆ ನವೀಕರಣಕ್ಕೆ ಅಗ್ನಿಶಾಮಕ ಇಲಾಖೆಯಿಂದ ಎನ್‌ಒಸಿ ಕೋರಿ ಅರ್ಜಿ ಸಲ್ಲಿಸಿದ್ದರು.

ಎನ್‌ಒಸಿ ನೀಡುವುದಕ್ಕೆ ಬಸವಪ್ರಭು ಶರ್ಮ ಅವರು ಲ್ಯಾಪ್‌ಟಾಪ್ ರೂಪದ ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಡೆಲ್ ಕಂಪನಿಯ 38,500 ಬೆಲೆಯ ಲ್ಯಾಪ್‌ಟಾಪ್ ಅನ್ನು ಬುಧವಾರ ಮಧ್ಯಾಹ್ನ ಪಡೆಯುತ್ತಿದ್ದಾಗ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿ ಇಬ್ಬರನ್ನು ವಶಕ್ಕೆ ಪಡೆದಿದ್ದಾರೆ.

ಲೋಕಾಯುಕ್ತ ಎಸ್‌ಪಿ ಎಂ.ಎಸ್. ಕೌಲಾಪೂರೆ ನೇತೃತ್ವದಲ್ಲಿ ಡಿವೈಎಸ್‌ಪಿ ಕೆ.ಜಿ. ರಾಮಕೃಷ್ಣ, ಇನ್‌ಸ್ಪೆಕ್ಟರ್‌ಗಳಾದ ಎಚ್.ಎಸ್. ರಾಷ್ಟ್ರಪತಿ, ಎನ್.ಎಚ್. ಆಂಜನೇಯ, ಸಿಬ್ಬಂದಿ ಚಂದ್ರಶೇಖರ್, ವಿ.ಎಚ್.ಆಂಜನೇಯ, ಎಸ್.ಎಂ. ವೀರೇಶಯ್ಯ, ಮುಜೀಬ್‌ಖಾನ್, ಎಸ್.ಎನ್.ಲಿಂಗೇಶ್, ಸಿ.ಎಚ್.ಬಸವರಾಜ, ಕೃಷ್ಣನಾಯ್ಕ ದಾಳಿ ನಡೆಸಿದ್ದರು.

## ಚುನಾವಣಾ ಅಖಾಡಕ್ಕಿಳಿದ ಸ್ವಾಮೀಜಿ



ವಿಜಯಪುರ: ರಾಜ್ಯ ವಿಧಾನಸಭೆ ಚುನಾವಣೆ ರಾಜಕೀಯ ಜನರಿಂದ ರಂಗೇರುತ್ತಿದೆ ಎನ್ನುವಾಗಲೇ ಮಠಾಧೀಶರೊಬ್ಬರು ನಾಮಪತ್ರ ಸಲ್ಲಿಸುವ ಮೂಲಕ ಗಮನ ಸೆಳೆದಿದ್ದಾರೆ.

ವಿಜಯಪುರ ಜಿಲ್ಲೆಯ ದೇವರಹಿಪ್ಪರಗಿ ಕ್ಷೇತ್ರಕ್ಕೆ ನಾಮಪತ್ರ ಸಲ್ಲಿಸಿರುವ ಮಠಾಧೀಶರು ಅಚ್ಚರಿ ಮೂಡಿಸಿದ್ದಾರೆ. ಜಿಲ್ಲೆಯ ನಿಡಗುಂದಿ ತಾಲೂಕಿನ ಇಟಗಿ ಗ್ರಾಮದ ಭೂಕೈಲಾಸ ಮೇಲುಗದ್ದುಗೆ ಹಿರೇಮಠದ ಸಂಸ್ಥಾನ ಮಠದ ಮಠಾಧೀಶರಾದ ಗುರುಶಾಂತವೀರ ಸ್ವಾಮೀಜಿ ಹಿರೇಮಠ ಇಟಗಿ ಚುನಾವಣಾ ಅಖಾಡಕ್ಕಿಳಿದಿರುವ ಮಠಾಧೀಶರು. ಕರ್ನಾಟಕ ಜನಸೇವಾ ಪಕ್ಷ (ಕೆಜೆಪಿ) ದಿಂದ ಸ್ಪರ್ಧೆಗಿಳಿದಿದ್ದು, ಅಧಿಕೃತಗವಾಗಿ ನಾಮಪತ್ರ ಸಲ್ಲಿಸಿದ್ದಾರೆ.

ಪೂರ್ವಾಶ್ರಮದ ತಾಯಿಯ ತವರು ಕೊಪ್ಪಳ ಜಿಲ್ಲೆಯ ಚಿಕ್ಕಮ್ಯಾಗೇರಿಯಲ್ಲಿ ಪ್ರಾಥಮಿಕ ಶಿಕ್ಷಣ ಪಡೆದಿರುವ ಶ್ರೀಗಳು, ಗಂಗಾವತಿ, ಕುರುಗೋಡುನಲ್ಲಿ ಪ್ರೌಢ ಶಿಕ್ಷಣ ಮುಗಿಸಿದ್ದು, ಕೊಪ್ಪಳ ಗವಿಮಠದಲ್ಲಿ ಪಿಸಯು ವರೆಗೆ ಶಿಕ್ಷಣ ಪಡೆದಿದ್ದಾರೆ. ಮೈಸೂರು ವಿಶ್ವವಿದ್ಯಾಲಯದಿಂದ ಬಿಎ ಪದವಿ ಪಡೆದಿದ್ದಾರೆ.

ತಮ್ಮ ಹೆಸರಿನಲ್ಲಿ ಸ್ವಗ್ರಾಮದ ಗ್ರಾಮೀಣ ಬ್ಯಾಂಕ್ನಲ್ಲಿ 2 ಲಕ್ಷ ಠೇವಣಿ ಇದ್ದು, ತಾಯಿ ಹೆಸರಿನಲ್ಲಿ 2 ಲಕ್ಷ ಠೇವಣಿ ಇದೆ. ಮಠಕ್ಕೆ ಸಂಬಂಧಿಸಿದಂತೆ ಭಕ್ತರು ನೀಡಿರುವ 5 ಕೆ.ಜಿ. ಬೆಳ್ಳಿಯ ವಸ್ತುಗಳು, 5 ತೊಲೆಯ ಐದು ಚಿನ್ನದುಂಗುರು ಹಾಗೂ ತಾಯಿಯ ಬಳಿ 5 ಚಿನ್ನದ ಉಂಗುರ ಇದೆ ಎಂದು ಘೋಷಿತ ಆಸ್ತಿಯಲ್ಲಿ ವಿವರಿಸಿದ್ದಾಗಿ ಹೇಳಿದ್ದಾರೆ.

ಹೀಗಾಗಿ ನಾನು ಯಾವುದೇ ರಾಜಕೀಯ ಗಣ್ಯರ ಹಾಗೂ ಮಠಾಧೀಶರ ಒತ್ತಡಕ್ಕೆ ಮಣಿದು ಚುನಾವಣಾ ಕಣದಿಂದ ಹಿಂದೆ ಸರಿಯುವುದಿಲ್ಲ. ನನ್ನ ಸ್ಪರ್ಧೆ ಖಚಿತ, ಭಕ್ತರ ಒತ್ತಾಸೆಯಿಂದ ಗೆಲುವು ಕೂ ಖಚಿತ ಎನ್ನು ಶ್ರೀಗಳು ಜಿಲ್ಲೆಯ ಚುನಾವಣೆಯ ರಾಜಕೀಯ ಹೊಸ ಇತಿಹಾಸ ಬರೆಯಲು ಮುಂದಾಗಿದ್ದಾರೆ.

## ಕಾಂಗ್ರೆಸ್ ಜೊತೆ ಟೋಪಿ ಹಾಕಲು ಹೊರಟ ಶೆಟ್ಟರ್: ಈಶ್ವರಪ್ಪ ವ್ಯಂಗ್ಯ



ಹುಬ್ಬಳ್ಳಿ: ಕಾಂಗ್ರೆಸ್ ಜೊತೆಗೂಡಿ ರಾಜ್ಯದ ಜನರಿಗೆ ಟೋಪಿ ಹಾಕಲು ಹೊರಟಿರುವ ಜಗದೀಶ ಶೆಟ್ಟರ್ ಅವರಿಗೆ ಬಿಜೆಪಿ ಅವಕಾಶ ನೀಡಲ್ಲ ಎಂದು ಪಕ್ಷದ ಹಿರಿಯ ಮುಖಂಡ ಕೆ.ಎಸ್. ಈಶ್ವರಪ್ಪ ಹೇಳಿದರು. ನಗರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

'ಶೆಟ್ಟರ್ ಅವರಿಗೆ ಯಾವುದೇ ರೀತಿಯಲ್ಲಿ ಅವಮಾನ ಮಾಡಿಲ್ಲ. ಅವರ ಸ್ವಾಭಿಮಾನಕ್ಕೆ ಧಕ್ಕೆ ತರುವಂತೆ ನಡೆದುಕೊಂಡಿಲ್ಲ. ಅವರೇ ಅಧಿಕಾರದ ಆಸೆಗಾಗಿ ಕಾಂಗ್ರೆಸ್ ಗೆ ಹೋಗಿದ್ದಾರೆ' ಎಂದು ಹರಿಹಾಯ್ದರು.

'ನಿಮಗೆ ಇಷ್ಟ ಇದ್ದಾಗ ಲಿಂಗಾಯತ, ಹಿಂದುತ್ವ, ಟೋಪಿ. ಇಲ್ಲದಿದ್ದರೆ ಪಕ್ಷ ಲಿಂಗಾಯತ ವಿರೋಧಿಯಾಗಿ ಬಿಡುತ್ತದೆಯೇ?' ಎಂದು ಕಿಡಿಕಾರಿದರು.

'ಪಕ್ಷದ ಅಭ್ಯರ್ಥಿ ಮಹೇಶ ಟೆಂಗಿನಕಾಯಿ ಅವರು ಲಿಂಗಾಯತರಲ್ಲವೇ? ಅವರ ಪರವಾಗಿ ನೀವು ಏಕೆ ಕೆಲಸ ಮಾಡಲಿಲ್ಲ. ನೀವು ಲಿಂಗಾಯತರ ವಿರೋಧಿ' ಎಂದು ಪ್ರಶ್ನಿಸಿದರು.

## ಅಶೋಕ ಪೂಜಾರಿ ಮನವೊಲಿಸಿದ ಸತೀಶ್ ಜಾರಕಿಹೊಳಿ

ಗೋಕಾಕ: ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿಯವರು ಕಾಂಗ್ರೆಸ್ ಬಂಡಾಯ ಅಭ್ಯರ್ಥಿ ಅಶೋಕ್ ಪೂಜಾರಿ ಮನೆಗೆ ಭೇಟಿ ನೀಡಿ, ಮನವೊಲೀಸಿದರು.

ಟಿಕೆಟ್ ಸಿಗದ ಹಿನ್ನೆಲೆಯಲ್ಲಿ ಕಾಂಗ್ರೆಸ್ ಮುಖಂಡ ಅಶೋಕ್ ಪೂಜಾರಿ ಅಸಮಾಧಾನ ಆಗಿದ್ದರು. ಇಂದು ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಲು ಅಶೋಕ್ ಪೂಜಾರಿ ಅವರು ನಿರ್ಧರಿಸಿದ್ದರು. ಕಾರಣ ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿ, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಮಾಜಿ ಶಾಸಕ ಅಶೋಕ ಪಟ್ಟಣ, ಲಕ್ಷ್ಮಣ ಸವದಿ, ಕಾಂಗ್ರೆಸ್ ಅಭ್ಯರ್ಥಿ ಮಹಾಂತೇಶ ಕಡಾಡಿ ಸೇರಿದಂತೆ ಅನೇಕ



ನಾಯಕರು ಅಶೋಕ್ ಪೂಜಾರಿ ಅವರನ್ನು ಮನವೊಲಿಸಿದರು.

ಇದೇ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ, ಹೈಕಮಾಂಡ್ ನಿರ್ದೇಶನದಂತೆ ಜಿಲ್ಲೆಯಲ್ಲಿ ಬಂಡಾಯ ಎದ್ದ ಅಭ್ಯರ್ಥಿಗಳನ್ನು ಮನವೊಲಿಸುವ ಪ್ರಯತ್ನ ಮಾಡಿದ್ದು, ಒಟಾರೇ ಕಾಂಗ್ರೆಸ್ ಅಭ್ಯರ್ಥಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಗೆಲ್ಲಿಸಲು ಪ್ರಯತ್ನಿಸಲಾಗುತ್ತಿದೆ ಎಂದು ತಿಳಿಸಿದರು.

## ನಾಮಪತ್ರ ಸಲ್ಲಿಸಲು ಕುದುರೆ ಏರಿ ಬಂದ ಅಭ್ಯರ್ಥಿ



ದೇವನಹಳ್ಳಿ: ರಾಜ್ಯ ವಿಧಾನಸಭೆ ಚುನಾವಣಾ ಕಣ ದಿನದಿಂದ ದಿನಕ್ಕೆ ರಂಗೇರುತ್ತಿದ್ದು ಅಭ್ಯರ್ಥಿಗಳು ಬೈಕ್ ರ್ಯಾಲಿ, ದೊಡ್ಡ ಮಟ್ಟದಲ್ಲಿ ಕಾರ್ಯಕರ್ತರನ್ನು ಸೇರಿಸುವ ಮೂಲಕ ತಮ್ಮ ಉಮೇದುವಾರಿಕೆಯನ್ನು ಸಲ್ಲಿಸುವ ಮೂಲಕ ತಮ್ಮ ಎದುರಾಳಿ ಅಭ್ಯರ್ಥಿಗೆ ತಮ್ಮಗಿರುವ ಬೆಂಬಲಿಗರ ಪಡೆಯನ್ನು ತೋರಿಸುತ್ತಿದ್ದಾರೆ.

ಬಹುತೇಕರು ತೆರೆದ ವಾಹನ, ಬೈಕ್ ಚಲಾಯಿಸಿ, ಪಕ್ಷದ ಮುಖಂಡರ ಜೊತೆ ಬಂದು ನಾಮಪತ್ರ ಸಲ್ಲಿಸಿರುವುದನ್ನು ನೋಡಿದ್ದೇವೆ. ಆದರೆ, ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ಎಎಪಿ ಅಭ್ಯರ್ಥಿ ಬಿ.ಕೆ. ಶಿವಪ್ಪ ವಿಭಿನ್ನವಾಗಿ ನಾಮಪತ್ರ ಸಲ್ಲಿಸಿದ್ದಾರೆ.

ಕುದುರೆ ಏರಿ ಬಂದ ಅಭ್ಯರ್ಥಿ: ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ಎಎಪಿ ಅಭ್ಯರ್ಥಿ ಬಿ.ಕೆ. ಶಿವಪ್ಪ ತಮ್ಮ ನಾಮಪತ್ರವನ್ನು ಸಲ್ಲಿಸಲು ಕುದುರೆ ಏರಿ ಬಂದಿರುವುದು ಎಲ್ಲರ ಗಮನ ಸೆಳೆದಿದೆ. ತಮ್ಮ ಉಮೇದುವಾರಿಕೆಯನ್ನು ಸಲ್ಲಿಸಲು ಶಿವಪ್ಪ ಕುದುರೆ ಏರಿ ಬರುತ್ತಿರುವುದು ವಿಶೇಷವೆನಿಸಿದ್ದು ಇವರಿಗೆ ಎಎಪಿ ಪ್ರಚಾರ ಸಮಿತಿ ಅಧ್ಯಕ್ಷ ಮುಖ್ಯಮಂತ್ರಿ ಚಂದ್ರು ಸಾಥ್ ನೀಡಿದ್ದಾರೆ.

## ಹುಕ್ಕೇರಿಯಲ್ಲಿ ಎ.ಬಿ. ಪಾಟೀಲ ನಾಮಪತ್ರ ಸಲ್ಲಿಕೆ



ಹುಕ್ಕೇರಿ: ಬರುವ ಮೇ 10 ರಂದು ನಡೆಯಲಿರುವ ಕರ್ನಾಟಕ ವಿಧಾನಸಭೆ ಸಾರ್ವತ್ರಿಕ ಚುನಾವಣೆಗೆ ಹುಕ್ಕೇರಿ ಮತಕ್ಷೇತ್ರದಿಂದ ಆಯ್ಕೆ ಬಯಸಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಎ.ಬಿ.ಪಾಟೀಲ ಪಟ್ಟಣದಲ್ಲಿ ತಮ್ಮ ಸಹಸ್ರಾರು ಕಾರ್ಯಕರ್ತರು, ಬೆಂಬಲಿಗರೊಂದಿಗೆ ರೋಡ್ ಶೋ ನಡೆಸಿ ಉಮೇದುವಾರಿಕೆ ಸಲ್ಲಿಸಿದರು.

ತಮ್ಮ ಉಮೇದುವಾರಿಕೆ ಸಲ್ಲಿಸುವ ಮುನ್ನ ವಿವಿಧ ದೇವಸ್ಥಾನಗಳಿಗೆ ತೆರಳಿ ಪೂಜೆ ಸಲ್ಲಿಸಿದರು. ಇದಕ್ಕೂ ಮೊದಲು ಕಾಂಗ್ರೆಸ್ ಅಭ್ಯರ್ಥಿ ಎ.ಬಿ.ಪಾಟೀಲ ಕೂಡ ಸಹಸ್ರಾರು ಕಾರ್ಯಕರ್ತರೊಂದಿಗೆ ತೆರೆದ ವಾಹನದಲ್ಲಿ ಕೋರ್ಟ್ ಸರ್ಕಲ್ನಿಂದ ತಹಸೀಲದಾರ ಕಚೇರಿಗೆ ತೆರಳಿ ತಮ್ಮ ಉಮೇದುವಾರಿಕೆ ದಾಖಲಿಸಿದರು. ಎಬಿಪಿಗೆ ಮಾಜಿ ಸಚಿವ ಶಶಿಕಾಂತ ನಾಯಿಕ, ಹಿರಿಯ ಮುಖಂಡ ಡಿ.ಟಿ.ಪಾಟೀಲ ಮತ್ತಿತರರು ಸಾಥ್ ನೀಡಿದರು.

## ದಾಖಲೆಗಳಿಲ್ಲದೆ ಸಾಗಿಸುತ್ತಿದ್ದ 1.54 ಕೋಟಿ ರೂ. ವಶಕ್ಕೆ ಪಡೆದ ಪೊಲೀಸರು



ಬೆಳಗಾವಿ: ಗುರುವಾರ ಮುಂಜಾನೆ ಕಾರ್ಯಾಚರಣೆ ನಡೆಸಿದ ಪೊಲೀಸರು ರಾಮದುರ್ಗ ಪಟ್ಟಣ ಪಟ್ಟಣದಲ್ಲಿ ದಾಖಲೆಗಳಿಲ್ಲದೆ ಸಾಗಾಟ ಮಾಡುತ್ತಿದ್ದ 1.54 ಕೋಟಿ ರೂ.ನ್ನು ವಶಪಡಿಸಿಕೊಂಡಿದ್ದಾರೆ.

ಗುರುವಾರ ನಸುಕಿನ ವೇಳೆ ಕಾರಿನಲ್ಲಿ ವ್ಯಕ್ತಿಯೋರ್ವ ರಾಮದುರ್ಗ ಪಟ್ಟಣದ ಮೂಲಕ ಬೆಳಗಾವಿಗೆ ಹಣ ಸಾಗಣೆ ಮಾಡುತ್ತಿರುವುದನ್ನು ಗಸ್ತಿನಲ್ಲಿದ್ದ ಪೊಲೀಸರು ತಪಾಸಣೆ ವೇಳೆ ಪತ್ತೆಹಚ್ಚಿದ್ದಾರೆ.

ಸೂಕ್ತ ದಾಖಲೆಗಳು ಇಲ್ಲದ ಕಾರಣ ಹಣ ಹಾಗೂ ಕಾರನ್ನು ವಶಕ್ಕೆ ಪಡೆದಿರುವ ಪೊಲೀಸರು ಚಾಲಕನನ್ನು ಬಂಧಿಸಿದ್ದಾರೆ.

ಪ್ರಕರಣವನ್ನು ಆದಾಯ ತೆರಿಗೆ ಇಲಾಖೆಗೆ ಒಪ್ಪಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089